ಸಂಪುಟ : 9 ಸಂಚಿಕೆ 75 ಪುಟ : 4 ಬೆಲೆ: 3.00 ಮಂಗಳವಾರ ಎಪ್ರಿಲ್ 23 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 75 Pages : 4 Price : 3.00 Tuesday April 23 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

**72 ಗಂಟೆಗಳೊಳಗೆ ಪ್ರಕರಣ ಬೇಧಿಸಿದ ಪೊಲೀಸರು | ಪ್ರಕಾಶ ಬಾಕಳೆ ಹಿರಿಯ ಪುತ್ರ ವಿನಾಯಕ ಸಹಿತ 8 ಜನರ ಬಂಧನ | ಉತ್ತರ ವಲಯ ಐಜಿಪಿ ವಿಕಾಸ್ ಕುಮಾರ್ ಮಾಹಿತಿ**

# ಆಸ್ತಿ ಕಲಹ ಕೊಲೆಯಲ್ಲಿ ಅಂತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಇಡೀ ಜಿಲ್ಲೆಯನ್ನೇ ಬೆಚ್ಚಿಬೀಳಿಸಿದ್ದ ಗದಗ-ಬೆಟಗೇರಿ ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ ಪುತ್ರ ಕಾರ್ತಿಕ ಸಹಿತ ನಾಲ್ವರ ಕೊಲೆ ಪ್ರಕರಣವನ್ನು ಬೇಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದು, ತಂದೆ-ತಾಯಿ ಕೊಲೆಗೆ ಸುಪಾರಿ ಕೊಟ್ಟ ಹಿರಿಯ ಮಗನೂ ಸೇರಿದಂತೆ ಒಟ್ಟು 8 ಜನರನ್ನು ಪೊಲೀಸರು ಬಂಧಿಸಿದ್ದಾರೆ.

ಈ ಕುರಿತು ಮಾಹಿತಿ ನೀಡಿದ ಉತ್ತರ ವಲಯ ಐಜಿಪಿ ವಿಕಾಸ್ ಕುಮಾರ್, ಸದರಿ ಪ್ರಕರಣದಲ್ಲಿ ದೂರುದಾರ ಪ್ರಕಾಶ ಬಾಕಳೆ ಅವರ ಮೊದಲ ಹೆಂಡತಿಯ ಹಿರಿಯ ಮಗ ವಿನಾಯಕ ಬಾಕಳೆ ಪ್ರಮುಖ ಆರೋಪಿಯಾಗಿದ್ದಾನೆ. ಜೊತೆಗೆ ಸುಪಾರಿ ಪಡೆದ ಗದಗ ರಾಜೀವಗಾಂಧಿ ನಗರದ ನಿವಾಸಿ ಫೈರೋಜ್ ನಿಸಾರಅಹ್ಮದ್ ಖಾಜಿ (29), ಹುಡ್ಕೋ ಕಾಲೋನಿ ನಿವಾಸಿ ಜಿಶಾನ್ ಮೆಹಬೂಬಅಲಿ ಖಾಜಿ (24) ಹಾಗೂ ಮಹಾರಾಷ್ಟ್ರದ ಮೀರಜ್ ನಿವಾಸಿಗಳಾದ



ಸಾಹಿತ್ ಅಷ್ಫಾಕ್ ಖಾಜಿ (19), ಸೋಹೆಲ್ ಅಷ್ಫಾಕ್ ಖಾಜಿ (19), ಸುಲ್ತಾನ್ ಜಿಲಾನಿ ಖಾಜಿ (23), ಮಹೇಶ ಜಗನ್ನಾಥ ಸಾಳೋಂಕೆ (21), ವಾಹಿದ ಲಿಯಾಕತ್ ಬೇಪಾರಿ (21) ಇವರನ್ನು ಬಂಧಿಸಲಾಗಿದೆ.

ಪ್ರಕಾಶ ಬಾಕಳೆ ಹಾಗೂ ವಿನಾಯಕ ಬಾಕಳೆ ಮಧ್ಯೆ ಆಸ್ತಿ ವಿಚಾರವಾಗಿ ಕೆಲ ತಿಂಗಳ ಹಿಂದೆ ಜಗಳ ನಡೆದಿತ್ತು. ತಂದೆಗೆ ಗೊತ್ತಿಲ್ಲದಂತೆ ವಿನಾಯಕ ಆಸ್ತಿಗಳನ್ನು ಮಾರಿದ್ದರಿಂದ ಪ್ರಕಾಶ ಬಾಕಳೆ ಆಕ್ರೋಶಗೊಂಡಿದ್ದರು. ಈ ವಿಚಾರಕ್ಕಾಗಿ ಇಬ್ಬರ ಮಧ್ಯೆ ಕಲಹ ನಡೆದಿತ್ತು. ಇದೇ ಕಾರಣಕ್ಕೆ ವಿನಾಯಕ ಬಾಕಳೆ ಕೊಲೆಗೆ ಸುಪಾರಿ ನೀಡಿದ್ದ ಎನ್ನುವುದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದ್ದು, ತನಿಖೆ ನಡೆಯುತ್ತಿದೆ ಎಂದು ಮಾಹಿತಿ ನೀಡಿದರು.

**ಎಲ್ಲರನ್ನೂ ಕೊಲ್ಲುವಂತೆ ಸೂಚಿಸಿದ್ದ**

ಕೊಲೆಗೆ ಸುಪಾರಿ ಕೊಟ್ಟಿದ್ದ ವಿನಾಯಕ ಬಾಕಳೆ, ಮನೆಯಲ್ಲಿರುವ ಎಲ್ಲರನ್ನೂ ಕೊಲೆ ಮಾಡಲು ಸೂಚಿಸಿದ್ದ. ದುರ್ದೈವದಿಂದ ಘಟನೆ ನಡೆದ ದಿನ ಮನೆಯಲ್ಲಿ ಸಂಬಂಧಿಗಳಾದ ಕೊಪ್ಪಳದ ಪರಶುರಾಮ, ಲಕ್ಷ್ಮೀ ಹಾಗೂ ಆಕಾಂಕ್ಷಾ ಕೂಡ ಉಳಿದುಕೊಂಡಿದ್ದು, ಅವರೂ ಹತ್ಯೆಗೊಳಗಾದರು. ಪ್ರಕಾಶ-ಸುನಂದಾ ಬಾಕಳೆ ದಂಪತಿ ತಮ್ಮ ಕೊಠಡಿಯ ಬಾಗಿಲು ತೆಗೆಯದೆ ಪೊಲೀಸರಿಗೆ ಮಾಹಿತಿ ನೀಡಿದ್ದರಿಂದ ಬದುಕುಳಿದಿದ್ದಾರೆ ಎಂದು ವಿಕಾಸ್ ಕುಮಾರ್ ತಿಳಿಸಿದರು.

ಪ್ರಮುಖ ಆರೋಪಿ ವಿನಾಯಕ ಬಾಕಳೆ, ಕಾರ್ ಮಾರಾಟ ಮಾಡುವ ಏಜೆಂಟ್ ಫೈರೋಜ್ ಹಾಗೂ ಜಿಶಾನ್ ಸಂಪರ್ಕಿಸಿ ಸುಪಾರಿ ಕೊಟ್ಟಿದ್ದಾನೆ. ಒಟ್ಟು 65 ಲಕ್ಷ ರೂಪಾಯಿಗೆ ಸುಪಾರಿ ಮಾತುಕತೆ ಆಗಿದೆ. ಆ ಪೈಕಿ 2 ಲಕ್ಷ ರೂ. ಮುಂಗಡವಾಗಿ ಕೊಟ್ಟಿದ್ದಾನೆ. ಸುಪಾರಿ ಪಡೆದ ಈ ಇಬ್ಬರು ಮೀರಜ್‌ನಿಂದ ಬಾಡಿಗೆ ಹಂತಕರನ್ನು ಕರೆಯಿಸಿಕೊಂಡಿದ್ದಾರೆ. ಈ ಎಂಟು ಜನ ಆರೋಪಿಗಳು ಕಡಿಮೆ ಸಮಯದಲ್ಲಿ ಹೊಂಚು ಹಾಕಿ ಕೊಲೆ ಮಾಡಿದ್ದಾರೆ. ಪ್ರಕರಣದ ಮೂವರು ಪ್ರಮುಖ ಆರೋಪಿಗಳನ್ನು ಗದಗ ನಗರದಲ್ಲಿಯೇ ಬಂಧಿಸಲಾಗಿದೆ. ಇನ್ನುಳಿದ ಐವರನ್ನು ಮೀರಜ್‌ನಲ್ಲಿ ಬಂಧಿಸಿ ಕರೆತರಲಾಗಿದೆ.

ಅತ್ಯಂತ ಸಂಕೀರ್ಣವಾಗಿದ್ದ ಈ ಕೊಲೆ ಪ್ರಕರಣವನ್ನು ಗದಗ ಜಿಲ್ಲಾ ಪೊಲೀಸರು ಕೇವಲ 72 ಗಂಟೆಯಲ್ಲಿ ಯಶಸ್ವಿಯಾಗಿ ಬೇಧಿಸಿದ್ದಾರೆ. ಪ್ರಕರಣವನ್ನು ಕಡಿಮೆ ಅವಧಿಯಲ್ಲಿ ಬೇಧಿಸಲು ಯಶಸ್ವಿಯಾದ ಪೊಲೀಸರ ತಂಡಕ್ಕೆ ಡಿಜಿ ಅಲೋಕ ಮೋಹನ್ ಅವರು 5 ಲಕ್ಷ ರೂ. ಬಹುಮಾನ ಘೋಷಿಸಿದ್ದಾರೆ. ಶೀಘ್ರವೇ ದೋಷಾರೋಪಣ ಪಟ್ಟಿ ಸಲ್ಲಿಸಿ, ಆರೋಪಿಗಳಿಗೆ ಗರಿಷ್ಠ ಶಿಕ್ಷೆ ವಿಧಿಸುವಂತೆ ಕ್ರಮ ಕೈಗೊಳ್ಳಲಾಗುವುದು ಎಂದರು.

**ಅನುಮಾನ ಯಾರ ಮೇಲೆ?**

ವಿನಾಯಕ ಬಾಕಳೆ ಕಿರಿಯ ಸಹೋದರ ದತ್ತಾತ್ರೇಯ ಬಾಕಳೆ ನಕಲಿ ಚಿನ್ನ ಅಡವಿಟ್ಟ ಪ್ರಕರಣದಲ್ಲಿ ಆರೋಪಿಯಾಗಿದ್ದು, ಆತ ಸದ್ಯ ತಲೆಮರೆಸಿಕೊಂಡಿದ್ದಾರೆ. ಈ ಸಮಯದಲ್ಲಿ ಪ್ರಕಾಶ ಮತ್ತು ಸುನಂದಾ ಬಾಕಳೆ ಕೊಲೆಯಾದರೆ ಸಹಜವಾಗಿ ದತ್ತಾತ್ರೇಯನ ಮೇಲೆ ಅನುಮಾನ ಮೂಡುತ್ತದೆ ಎನ್ನುವ ಲೆಕ್ಕಾಚಾರದಿಂದ ವಿನಾಯಕ ಸುಪಾರಿ ಕೊಟ್ಟಿದ್ದ. ಆದರೆ ಪೊಲೀಸರ ಚಾಣಾಕ್ಷತನದಿಂದ ವಿನಾಯಕನ ಕೈಗೆ ಕೋಳ ಬಿದ್ದಿದೆ.

ಈ ಸಂದರ್ಭದಲ್ಲಿ ಎಸ್ಪಿ ಬಿ.ಎಸ್ ನೇಮಗೌಡ, ಹೆಚ್ಚುವರಿ ಎಸ್ಪಿ ಎಂ.ಬಿ. ಸಂಕದ, ಡಿವೈಎಸ್ಪಿ ಜೆ.ಎಚ್. ಇನಾಮದಾರ, ಸಿಪಿಐಗಳಾದ ಡಿ.ಬಿ ಪಾಟೀಲ, ಧನಗರ್, ಪಿಎಸ್‌ಐಗಳಾದ ಎಲ್.ಕೆ. ಜೂಲಕಟ್ಟಿ, ಈರಣ್ಣ ರಿತ್ತಿ, ತಾಂತ್ರಿಕ ಸಿಬ್ಬಂದಿಗಳಿದ್ದರು.

## ಕುಡಿಯುವ ನೀರನ್ನು ಸಮರ್ಪಕವಾಗಿ ಪೂರೈಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಮುಂಗಾರು ಆರಂಭ ಆಗುವವರೆಗೆ ಜಿಲ್ಲೆಯಲ್ಲಿ ಕುಡಿಯುವ ನೀರು ಪೂರೈಕೆಯಲ್ಲಿ ಸಮಸ್ಯೆ ಉಂಟಾಗದಂತೆ ಅಧಿಕಾರಿಗಳು ಗಮನಹರಿಸಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬರ ನಿರ್ವಹಣೆ ಹಾಗೂ ಮುಂಗಾರು ಪೂರ್ವ ಹಂಗಾಮಿನಲ್ಲಿ ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಸೋಮವಾರ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಮತ್ತು ಪಟ್ಟಣ ಪ್ರದೇಶ ಸೇರಿದಂತೆ ಯಾವ ಕಡೆಯೂ ಸಹ ಕುಡಿಯುವ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗದಂತೆ ಎಚ್ಚರ ವಹಿಸಬೇಕು ಎಂದು ಜಿಲ್ಲಾಧಿಕಾರಿ ಅವರು ನಿರ್ದೇಶನ ನೀಡಿದರು.

ಗದಗ, ರೋಣ, ಗಜೇಂದ್ರಗಡ, ಮುಂಡರಗಿ, ಶಿರಹಟ್ಟಿ, ನರಗುಂದ, ಲಕ್ಷ್ಮೇಶ್ವರ ತಾಲೂಕು ಕೇಂದ್ರಗಳು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು ಪೂರೈಕೆ ಸಮರ್ಪಕವಾಗಿ ನಿರ್ವಹಿಸಬೇಕು. ಜಾನುವಾರುಗಳಿಗೆ ಮೇವನ್ನು ಸರಿಯಾಗಿ ಪೂರೈಸಬೇಕು. ಮೇವು ಕೊರತೆಯಾಗದಂತೆ ದಾಸ್ತಾನು ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಈ ಸಂದರ್ಭದಲ್ಲಿ ತಾ.ಪಂ ಇಓಗಳು ಹಾಗೂ ಸಂಬಂಧಪಟ್ಟ ಇಂಜಿನಿಯರ್‌ಗಳು, ಮೇ 15ರವರೆಗೆ ಕುಡಿಯುವ ನೀರು ಪೂರೈಕೆಯಲ್ಲಿ ಯಾವುದೇ ರೀತಿ ಸಮಸ್ಯೆ ಉಂಟಾಗದಂತೆ ಗಮನ ಹರಿಸಲಾಗುವುದು ಎಂದು ಮಾಹಿತಿ ನೀಡಿದರು.

ಜಿ.ಪಂ ಸಿಇಓ ಎಸ್.ಭರತ್ ಮಾತನಾಡಿ, ಕುಡಿಯುವ ನೀರು ಪೂರೈಕೆ ಕಾಮಗಾರಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕು.

▸▸3ನೇ ಪುಟಕ್ಕೆ

**ಮತದಾನ ಮಹತ್ವ ಕುರಿತು ಜಾಗೃತಿ ಕಾರ್ಯಕ್ರಮ**

## ಇತರರನ್ನೂ ಮತದಾನಕ್ಕೆ ಪ್ರೇರೇಪಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ಮೇ 7ರಂದು ನಡೆಯುವ ಮತದಾನದಂದು ಅರ್ಹರೆಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು. ಪ್ರತಿಯೊಂದು ಮತವೂ ಅಮೂಲ್ಯವಾಗಿದ್ದು, ಅರ್ಹರು ಮತದಾನ ಮಾಡುವುದರ ಜೊತೆಗೆ ಉಳಿದವರನ್ನೂ ಮತದಾನ ಮಾಡಲು ಪ್ರೇರೇಪಿಸಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಸಹಭಾಗಿತ್ವ ಸಮಿತಿ ಹಾಗೂ ವಿವಿಧ ಇಲಾಖೆಗಳ ಸಹಕಾರದಲ್ಲಿ ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ನಡೆದ ಮತದಾನದ ಮಹತ್ವ ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಅವರು ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿದರು.

ಮತದಾನ ಮಾಡುವುದು 18 ವರ್ಷ ಮೇಲ್ಪಟ್ಟ ಎಲ್ಲ ನಾಗರಿಕರ ಕರ್ತವ್ಯ ಮತ್ತು ಜವಾಬ್ದಾರಿಯಾಗಿದೆ. ಆ ನಿಟ್ಟಿನಲ್ಲಿ ಪ್ರಜಾಪ್ರಭುತ್ವದ ಹಬ್ಬದಲ್ಲಿ ಎಲ್ಲರೂ ಪಾಲ್ಗೊಳ್ಳುವಂತಾಗಬೇಕು. ಪ್ರಜಾಪ್ರಭುತ್ವದಲ್ಲಿ ದೃಢ ವಿಶ್ವಾಸವುಳ್ಳ ಭಾರತದ ಪೌರರಾದ ನಾವು, ನಮ್ಮ



ದೇಶದ ಪ್ರಜಾಸತ್ತಾತ್ಮಕ ಸಂಪ್ರದಾಯಗಳು ಮತ್ತು ಮುಕ್ತ, ನ್ಯಾಯಸಮ್ಮತ ಮತ್ತು ಶಾಂತಿಯುತ ಚುನಾವಣೆಗಳ ಘನತೆಯನ್ನು ಎತ್ತಿ ಹಿಡಿಯುತ್ತೇವೆ ಮತ್ತು ಪ್ರತಿಯೊಂದು ಚುನಾವಣೆಯಲ್ಲಿ ನಿರ್ಭೀತರಾಗಿ ಮತ್ತು ಧರ್ಮ, ಜನಾಂಗ, ಜಾತಿ, ಮತ, ಭಾಷೆ ಅಥವಾ ಯಾವುದೇ ಪ್ರೇರೇಪಣೆಗಳ ದಾಕ್ಷಿಣ್ಯಗಳಿಂದ ಪ್ರಭಾವಿತರಾಗದೇ ಮತ ಚಲಾಯಿಸುತ್ತೇವೆಂದು ಪ್ರತಿಜ್ಞಾ ವಿಧಿ ಬೋಧಿಸಿದರು.

ಜಿ.ಪಂ ಸಿಇಓ ಎಸ್. ಭರತ್ ಮಾತನಾಡಿ, ಅರ್ಹರೆಲ್ಲರೂ ಮತದಾನ ಮಾಡುವುದರ ಜೊತೆಗೆ ಮತ್ತೊಬ್ಬರು ಮತದಾನ ಮಾಡಿರುವುದರ ಬಗ್ಗೆ ಖಾತರಿಪಡಿಸಿಕೊಳ್ಳುವ ನಿಟ್ಟಿನಲ್ಲಿ ಜಾಗೃತಿ ಮೂಡಿಸಬೇಕು. ಪ್ರಜಾಪ್ರಭುತ್ವ ಹಬ್ಬದಲ್ಲಿ ಮತದಾನ ಮಾಡುವುದು ಅರ್ಹರೆಲ್ಲರ ಹಕ್ಕಾಗಿದೆ. ಮತದಾನ ಹೆಚ್ಚಳಕ್ಕೆ ಸ್ವೀಪ್ ಸಮಿತಿ ವತಿಯಿಂದ ಹಲವು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಆ ನಿಟ್ಟಿನಲ್ಲಿ ಶೇಕಡಾವಾರು ಮತದಾನ ಹೆಚ್ಚಳಕ್ಕೆ ಎಲ್ಲರೂ ಕೈ ಜೋಡಿಸಬೇಕು ಎಂದು ಕೋರಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ, ಜಿ.ಪಂ ಉಪ ಕಾರ್ಯದರ್ಶಿ ಹಾಗೂ ಸ್ವೀಪ್ ಜಿಲ್ಲಾ ನೋಡಲ್ ಅಧಿಕಾರಿ ಸಿ.ಬಿ. ದೇವರಮನಿ, ಉಪ ವಿಭಾಗಾಧಿಕಾರಿ ವೆಂಕಟೇಶ ನಾಯ್ಕ, ಚುನಾವಣಾಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

**ನೇಹಾ ಹಿರೇಮಠ ಹತ್ಯೆ ಪ್ರಕರಣದ ತನಿಖೆ ಚುರುಕುಗೊಳಿಸಲು ಜಿಲ್ಲಾ ಬಿಜೆಪಿ ಆಗ್ರಹ**

## ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ



■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಹುಬ್ಬಳ್ಳಿ ನಗರದ ಕಾಲೇಜ್ ಕ್ಯಾಂಪಸ್‌ನಲ್ಲಿ ಹಾಡುಹಗಲೇ ನೇಹಾ ಹಿರೇಮಠ ಎಂಬ ವಿದ್ಯಾರ್ಥಿನಿಯನ್ನು ಬರ್ಬರವಾಗಿ ಹತ್ಯೆ ಮಾಡಲಾಗಿದೆ. ತನಿಖೆ ಕೈಗೊಂಡು ತಪ್ಪಿತಸ್ಥನಿಗೆ ಶಿಕ್ಷೆ ಆಗುವಂತೆ ನೋಡಿಕೊಳ್ಳುವ ಬದಲು ವ್ಯಕ್ತಿಗತ ಕಾರಣಗಳಿಂದ ಈ ಕೃತ್ಯ ಜರುಗಿದೆ, ಆರೋಪಿ ಅಮಾಯಕ ಎಂಬಂತೆ ಸಚಿವರೇ ಹೇಳಿಕೆಗಳನ್ನು ನೀಡುತ್ತಿದ್ದಾರೆ.

ಅಲ್ಪಸಂಖ್ಯಾತರ ತುಷ್ಟೀಕರಣ, ಹಿಂದೂಗಳ ಮೇಲಿನ ದ್ವೇಷದ ರಾಜಕಾರಣ, ಅಮಾಯಕ ಹಿಂದೂ ಹೆಣ್ಣುಮಕ್ಕಳ ಕಗ್ಗೊಲೆ, ಜೈ ಶ್ರೀರಾಮ್ ಎಂದು ಕೂಗಿದವರ ಮೇಲೆ ಹಲ್ಲೆ, ಪಾಕಿಸ್ತಾನ ಪರ ಘೋಷಣೆ ಕೂಗಿದರೆ ಪುರಸ್ಕಾರ ಹೀಗೆ ಮತೀಯ ಭಾವನೆಯಿಂದ ಸರ್ಕಾರವನ್ನು ನಡೆಸುತ್ತಿರುವದು ಖಂಡನೀಯ ಎಂದು ರಾಜು ಕುರುಡಗಿ ಆಕ್ರೋಶ ವ್ಯಕ್ತಪಡಿಸಿದರು.

▸▸3ನೇ ಪುಟಕ್ಕೆ

**ನೇಹಾ ಹತ್ಯೆ ಖಂಡಿಸಿ ಎಬಿವಿಪಿ ನೇತೃತ್ವದಲ್ಲಿ ಪ್ರತಿಭಟನೆ**

## ಆರೋಪಿ ಫಯಾಜ್‌ಗೆ ಗಲ್ಲು ಶಿಕ್ಷೆ ವಿಧಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯಲ್ಲಿ ಕಾಲೇಜು ವಿದ್ಯಾರ್ಥಿನಿ ನೇಹಾ ಹತ್ಯೆ ಖಂಡಿಸಿ ಎಬಿವಿಪಿ ನೇತೃತ್ವದಲ್ಲಿ ಕಾಲೇಜು ವಿದ್ಯಾರ್ಥಿಗಳು ನಗರದ ಜನರಲ್ ಕಾರ್ಯಪ್ಪ ಸರ್ಕಲ್ (ಹಳೇ ಜಿಲ್ಲಾಧಿಕಾರಿ ಕಚೇರಿ ವೃತ್ತ)ದಲ್ಲಿ ಸೋಮವಾರ ಪ್ರತಿಭಟನೆ ನಡೆಸಿದರು. ನಂತರ ಮಾನವ ಸರಪಳಿ ನಿರ್ಮಿಸಿ ರಾಜ್ಯ ಸರಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನಾ ಸ್ಥಳದಲ್ಲಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ ಹಾಗೂ ಆರೋಪಿ ಫಯಾಜ್ ಪ್ರತಿಕೃತಿ ದಹಿಸಿ ಆಕ್ರೋಶ ವ್ಯಕ್ತಪಡಿಸಿದ ವಿದ್ಯಾರ್ಥಿಗಳು, ಪ್ರತಿಭಟನಾ ಸ್ಥಳಕ್ಕೆ ಜಿಲ್ಲಾಧಿಕಾರಿಗಳು ಆಗಮಿಸಬೇಕು ಎಂದು ಪಟ್ಟು



ಹಿಡಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ವಿದ್ಯಾರ್ಥಿಗಳ ಮನವೊಲಿಸಲು ಎಷ್ಟೇ ಪ್ರಯತ್ನಿಸಿದರೂ ಜಿಲ್ಲಾಧಿಕಾರಿಗಳು ಆಗಮಿಸಲೇಬೇಕು ಎಂದು ಪ್ರತಿಭಟನೆ ಮುಂದುವರಿಸಿದರು.

ಹುಬ್ಬಳ್ಳಿಯ ಬಿವಿಬಿ ಕಾಲೇಜಿನ ಎಂಸಿಎ ವಿದ್ಯಾರ್ಥಿನಿ ನೇಹಾ ಹಿರೇಮಠರನ್ನು ಹಾಡುಹಗಲೇ ಕಾಲೇಜ್ ಕ್ಯಾಂಪಸ್‌ನಲ್ಲಿ ಚಾಕುವಿನಿಂದ ಚುಚ್ಚಿ ಬರ್ಬರವಾಗಿ ಹತ್ಯೆ ಮಾಡಿದ ಆರೋಪಿ ಫಯಾಜ್‌ಗೆ ಗಲ್ಲು ಶಿಕ್ಷೆ ವಿಧಿಸಬೇಕು ಎಂದು ವಿದ್ಯಾರ್ಥಿಗಳು ಆಗ್ರಹಿಸಿದರು.

ರಾಜ್ಯದಲ್ಲಿ ಕಾನೂನು-ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದ್ದು, ಕೊಲೆ, ದರೋಡೆ, ಹಲ್ಲೆಗಳಂತಹ ಘಟನೆಗಳು ನಿರಂತರವಾಗಿ ನಡೆಯುತ್ತಿದ್ದರೂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಕಣ್ಮುಚ್ಚಿ ಕುಳಿತಿದೆ. ಹತ್ಯೆಯ ಪ್ರಕರಣಗಳಲ್ಲಿ ವೈಯಕ್ತಿಕ ಕಾರಣ ಎಂಬ ಹೇಳಿಕೆ ನೀಡುವ ಮೂಲಕ ಹಲ್ಲೆಕೋರರಿಗೆ ಬಹಿರಂಗವಾಗಿ ಪ್ರಚೋದನೆ ನೀಡಲಾಗುತ್ತಿದೆ ಎಂದು ಆರೋಪಿಸಿದರು.

▸▸3ನೇ ಪುಟಕ್ಕೆ

ಹುಬ್ಬಳ್ಳಿಯ ವಿದ್ಯಾರ್ಥಿನಿ ನೇಹಾ ಹಿರೇಮಠ ಹತ್ಯೆ ಪ್ರಕರಣದಲ್ಲಿ ರಾಜ್ಯ ಸರ್ಕಾರದ ವೈಫಲ್ಯಕ್ಕೆ ಕ್ರಮ ಕೈಗೊಳ್ಳುವುದು ಹಾಗು ನ್ಯಾಯಪರ ತನಿಖೆಯನ್ನು ಚುರುಕುಗೊಳಿಸಿ ತಪ್ಪಿತಸ್ಥ ವ್ಯಕ್ತಿಯನ್ನು ಶಿಕ್ಷಿಸುವ ಕುರಿತು ಜಿಲ್ಲಾ ಬಿಜೆಪಿ ವತಿಯಿಂದ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರಿಗೆ ಮನವಿ ಸಲ್ಲಿಸಲಾಯಿತು.

## ಸಂಪಾದಕೀಯ

# ಈಗ ಜಾಹೀರಾತು ರಾಜಕಾರಣ

ನಾವೆಲ್ಲ ಜಾತಿ ರಾಜಕಾರಣ ಕೇಳಿದ್ದೇವೆ. ದ್ವೇಷ ರಾಜಕಾರಣ ನೋಡಿದ್ದೇವೆ. ಹಣ ಮತ್ತು ಹೆಂಡದ ರಾಜಕಾರಣ ಕಂಡಿದ್ದೆವೆ. ಅದರ ಅದರ ಸಾಲಿಗೆ ಈಗ ಹೊಸ ಸೇರ್ಪಡೆಯೇ ಈ ಜಾಹೀರಾತು ರಾಜಕಾರಣ.

ಕಳೆದ ಕೆಲವು ದಿನಗಳಿಂದ ಪ್ರತಿಷ್ಠಿತ ಪತ್ರಿಕೆಗಳ ಮುಖಪುಟದಲ್ಲಿ ಬರುತ್ತಿರುವ ಜಾಹೀರಾತುಗಳನ್ನು

ಗಮನಿಸಿದಲ್ಲಿ, ಜಾಹೀರಾತು ರಾಜಕಾರಣ ಯಾವ ಮಟ್ಟಿಗೆ ಪ್ರಕಟವಾಗುತ್ತಿದೆ ಎನ್ನುವುದು ಅರಿವಿಗೆ ಬರುತ್ತದೆ.

ಮೊದಲಿಗೆ ಕಾಂಗ್ರೆಸ್ ಪಕ್ಷವು ಚೊಂಬಿನ ಚಿತ್ರವನ್ನು ಹಾಕುವ ಮೂಲಕ ಬಿಜೆಪಿ ಕರ್ನಾಟಕಕ್ಕೆ ಚೊಂಬು ಕೊಟ್ಟಿದೆ. ಪ್ರಧಾನಿ ಮೋದಿ ಕರ್ನಾಟಕದ ಜನರಿಗೆ ಚೊಂಬು ಕೊಟ್ಟಿದ್ದಾರೆ. ಕರ್ನಾಟಕ 100 ರೂಪಾಯಿ ತೆರಿಗೆ ಪಾವತಿಸಿದರೆ ಅದರಲ್ಲಿ ಕೇವಲ 13 ರೂಪಾಯಿ ವಾಪಸ್ ಕೊಡುತ್ತಿದ್ದಾರೆ. ಇದು ಜನರಿಗೆ ಕೊಟ್ಟ ಚೊಂಬು ಎಂದು ಪ್ರಚಾರ ಮಾಡುವ ಮೂಲಕ ಜಾಹೀರಾತು ರಾಜಕಾರಣಕ್ಕೆ ಮುನ್ನುಡಿ ಬರೆಯಿತು.

ಇದಕ್ಕೆ ಪ್ರತಿಯಾಗಿ ಬಿಜೆಪಿಯೂ ಸಹ ಕಾಂಗ್ರೆಸ್ ಸರ್ಕಾರದ ಬಗ್ಗೆ ಎಚ್ಚರಿಕೆ, ಡೇಂಜರ್ ಎನ್ನುವ ಜಾಹೀರಾತನ್ನ ನೀಡಿತು. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಲವ್ ಜಿಹಾದ್ ಹೆಚ್ಚಾಗುತ್ತದೆ, ಭಯೋತ್ಪಾದನೆ ಹೆಚ್ಚಾಗುತ್ತದೆ, ಕಾವೇರಿ ನೀರು ಕರ್ನಾಟಕದಿಂದ ಮಾಯವಾಗುತ್ತದೆ ಎನ್ನುವ ಅರ್ಥದ ಒಕ್ಕಣೆಯನ್ನ ಹೊಂದಿರುವ ಜಾಹೀರಾತು ಪ್ರಕಟವಾಗಿದೆ.


ಈ ಜಾಹೀರಾತು ರಾಜಕಾರಣದಿಂದ ಈ ಎರಡು ಪಕ್ಷಗಳು ಪರಸ್ಪರ ಕೆಸರೆರಚಾಟ ಆರಂಭಿಸಿರುವುದಂತು ಸತ್ಯ. ಪ್ರತಿಯೊಂದು ಜಾಹೀರಾತು ಓದುಗರ ಮೇಲೆ ಪ್ರಭಾವ ಬೀರುತ್ತದೆ. ಆದರೆ ಹೀಗೆ ಪರಸ್ಪರ ನಿಂದನೆಯ ಜಾಹೀರಾತುಗಳು ಜನರ ಮನಸ್ಥಿತಿಯನ್ನ ಬದಲಿಸುವುದಿಲ್ಲ, ಬದಲಿಗೆ ಮನರಂಜನೆಯನ್ನು ಕೊಡುತ್ತವೆ.

ಇಂತಹ ಕ್ರಮಗಳಿಂದ ರಾಜಕೀಯ ಪಕ್ಷಗಳಿಗೆ ಯಾವುದೇ ಲಾಭ ಆಗುವುದಿಲ್ಲ. ಆದರೆ ಪತ್ರಿಕೆಗಳು ಲಕ್ಷ ಲಕ್ಷ ರೂಪಾಯಿ ಸಂಪಾದನೆ ಮಾಡುತ್ತವೆ. ಇಬ್ಬರ ಜಗಳದಲ್ಲಿ ಮೂರನೇಯವರಿಗೆ ಲಾಭ ಎನ್ನುವುದು ಈ ಜಾಹೀರಾತು ರಾಜಕಾರಣ ಮತ್ತೊಂದು ಉದಾಹರಣೆ ಅಷ್ಟೆ. ಇನ್ನಾದರೂ ರಾಜಕೀಯ ಪಕ್ಷಗಳು ಪ್ರಬುದ್ಧ ನಡೆಯನ್ನು ಅನುಸರಿಸುವ ಬಗ್ಗೆ ಚಿಂತನೆ ನಡೆಸಲಿ.

### ಇಂದು ತೋಂಟದಾರ್ಯ ಜಾತ್ರಾ ಮಹಾರಥೋತ್ಸವ ನೆರವೇರುತ್ತಿರುವ ನಿಮಿತ್ತ ವಿಶೇಷ ಲೇಖನ

# ಜಾತ್ರೆಗಳ ಆಚರಣೆಗೆ ಹೊಸ ಭಾಷ್ಯ

ತೇರಿನ ಕಳಸಕ್ಕೆ ಉತ್ತತ್ತಿ-ಬಾಳೆಹಣ್ಣು ಎಸೆದು, ಮೋಜು-ಮಸ್ತಿ ಮಾಡಿ ಮನೆಗೆ ತೆರಳುವುದೇ ನಾಡಿನ ಅನೇಕ ಜಾತ್ರೆಗಳ ಧ್ಯೇಯವಾಗಿದ್ದ ಕಾಲವೊಂದಿತ್ತು. ಜಾತ್ರೆಗಳ ಹೆಸರಿನಲ್ಲಿ ಅರ್ಥಹೀನ ಆಚರಣೆಗಳ ಪಾಲನೆ, ಕುರುಡು ನಂಬಿಕೆಗಳ ಅನುಮೋದನೆ ಅವ್ಯಾಹತವಾಗಿ ಸಾಗುತ್ತಿತ್ತು. ನಾಡಿನ ಪ್ರಖ್ಯಾತ ಮಠ-ದೇವಾಲಯಗಳಿಂದ, ಗ್ರಾಮದೇವತೆಗಳ ಜಾತ್ರೆಗಳವರೆಗೂ ಅದೇ ಸಿದ್ಧಸೂತ್ರಗಳು ಜಾರಿಯಲ್ಲಿದ್ದವು. ಕೆಲವು ಆಚರಣೆಗಳು ತರ್ಕಬದ್ಧವಲ್ಲ ಎಂದು ಗೊತ್ತಿದ್ದರೂ ಆ ಮಠದ ಸ್ವಾಮೀಜಿಗಳಾಗಲಿ, ಭಕ್ತರಾಗಲಿ ಅವುಗಳನ್ನು ಸ್ಥಗಿತಗೊಳಿಸುವ ಸಾಹಸಕ್ಕೆ ಮುಂದಾಗಿರಲಿಲ್ಲ.



ಇದೆಲ್ಲದಕ್ಕೆ ಅಪವಾದ ಎಂಬಂತೆ ಗದುಗಿನ ಲಿಂಗೈಕ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ತಾವು ಪೀಠವನ್ನೇರಿದ ಕೆಲವೇ ವರ್ಷಗಳಲ್ಲಿ ತೋಂಟದಾರ್ಯ ಜಾತ್ರೆಯಿಂದ ಒಂದೊಂದೇ ಅರ್ಥಹೀನ ಆಚರಣೆಗಳನ್ನು ನೇಪಥ್ಯಕ್ಕೆ ಸರಿಸಿ ಆ ಜಾಗೆಯಲ್ಲಿ ಜನರಿಗೆ ಒಳಿತಾಗುವಂಥ ಅಪೂರ್ವ ಆಚರಣೆಗಳನ್ನು ಅಳವಡಿಸುತ್ತಾ ಸಾಗಿದ್ದು ಇತಿಹಾಸ. 'ಲಿಂಗಾಯತರಿಗೆ ಮಾತ್ರ ಪ್ರವೇಶ' ಎಂಬ ನಾಮಫಲಕವನ್ನು ತೋಂಟದಾರ್ಯ ಮಠದ ಮಹಾದ್ವಾರದಿಂದ ಕಿತ್ತೆಸೆಯುವ ಮೂಲಕ ಅದಾಗಲೇ ಮಠವನ್ನು ಸರ್ವಜನಾಂಗದ ಶಾಂತಿಯ ತೋಟವನ್ನಾಗಿಸಿದ್ದ ಶ್ರೀಗಳು, ತೋಂಟದಾರ್ಯ ಜಾತ್ರೆಗೆ ಹೊಸ ಭಾಷ್ಯ ಬರೆಯುವ ಮುಖೇನ ನಾಡಿನ ಇತರ ಜಾತ್ರೆಗಳು ತಮ್ಮನ್ನು ಆತ್ಮಾವಲೋಕನ ಮಾಡಿಕೊಳ್ಳುವಂತೆ ಮಾಡಿದ್ದರು.

ತೇರಿಗೆ ಅನ್ನ ಹಾಕುವ ಪದ್ಧತಿಗೆ ತಿಲಾಂಜಲಿ ನೀಡಿ ಭಕ್ತರ ದಾಸೋಹಕ್ಕೆ ಪ್ರಥಮ ಆದ್ಯತೆ ನೀಡಿದರು. ಅಡ್ಡಪಲ್ಲಕ್ಕಿಯಲ್ಲಿ ಕೂರದೇ ಇರುವ ಸ್ವಾಮೀಜಿಗಳೇ ಇಲ್ಲದ ಆ ಕಾಲದಲ್ಲಿ, ತಾವು ಅಡ್ಡಪಲ್ಲಕ್ಕಿಯಲ್ಲಿ ಕೂರದೇ ವಚನದ ಕಟ್ಟುಗಳನ್ನು ಇಟ್ಟು ಮೆರೆಸಿದ್ದು ಹಾಗೂ ಕೆಳದಿ ಅರಸರು ನೀಡಿದ್ದ ಪಾದುಕೆಗಳನ್ನು ತೊಡದೇ ಭಕ್ತರೊಟ್ಟಿಗೆ ಸಾಮಾನ್ಯರಾಗಿ ಹೆಜ್ಜೆ ಹಾಕಿದ್ದು ವೈಚಾರಿಕ ಕ್ರಾಂತಿಯೇ ಆಗಿತ್ತು.

ಇಂಥ ಬದಲಾವಣೆಗಳು ಎಂಥ ಸ್ಥಿತ್ಯಂತರಕ್ಕೆ ಕಾರಣವಾದುವೆಂದರೆ, ಕೆಲವೇ ವರ್ಷಗಳಲ್ಲಿ ಅನೇಕ ಪ್ರತಿಷ್ಠಿತ ಮಠಗಳಿಂದ ಮೂಢನಂಬಿಕೆಗಳು ಕಾಲಗರ್ಭ ಸೇರಿದವು. ಅದೆಲ್ಲದಕ್ಕೂ ಗಟ್ಟಿಯಾಗಿ ಮೇಲ್ಪಂಕ್ತಿ ಹಾಕುವ ದಿಟ್ಟ ಸ್ವಾಮೀಜಿಯೊಬ್ಬರ ಅವಶ್ಯಕತೆ ಇತ್ತು. ಆ ಸ್ಥಾನವನ್ನು ಲಿಂಗೈಕ್ಯ ತೋಂಟದ ಶ್ರೀಗಳು ತಮಗರಿವಿಲ್ಲದಂತೆಯೇ ಸಮರ್ಥವಾಗಿ ನಿಭಾಯಿಸಿದರು. 300ಕ್ಕೂ ಹೆಚ್ಚು ವರ್ಷಗಳ ಇತಿಹಾಸ ತೋಂಟದಾರ್ಯ ಜಾತ್ರೆಗೆ ಇದ್ದರೂ ಸಹ 1975ರಿಂದ ಆಚೆಗೆ ಅಂದರೆ ಸಿದ್ಧಲಿಂಗ ಶ್ರೀಗಳು ಪೀಠವನ್ನೇರಿದ ಬಳಿಕ ಜರುಗಿದ ಜಾತ್ರೆಗಳು ಕೇವಲ ಜಾತ್ರೆಗಳಾಗದೇ ಬಸವತತ್ವದ, ವೈಚಾರಿಕ ನಿಲುವಿನ ಹೆಗ್ಗುರುತುಗಳೇ ಆದವು.

ಶ್ರೀಮಠ ಆರ್ಥಿಕವಾಗಿ ಸಬಲವಾದಂತೆಲ್ಲ ಹತ್ತು-ಹಲವು ಜನೋಪಯೋಗಿ ಕಾರ್ಯಕ್ರಮಗಳನ್ನು ಜಾತ್ರೆಯಲ್ಲಿ ಹಾಕಿಕೊಳ್ಳುತ್ತಾ ಅನ್ನ-ಅಕ್ಷರ-ಆರೋಗ್ಯಗಳಿಗೆ ಜಾತ್ರೆಯಲ್ಲಿ ಸಿಂಹಪಾಲು ನೀಡಿದರು. ಜಾತ್ರೆಯು ಸಂಘಟಿತವಾಗಿ ನೆರವೇರಲು ಸಮಿತಿಯನ್ನು ರಚಿಸಿ ಆ ಸಮಿತಿಗಳಿಗೆ ಲಿಂಗಾಯತರೇತರರನ್ನೂ ಅಧ್ಯಕ್ಷರನ್ನಾಗಿಸುವ ಮೂಲಕ ಇದೊಂದು ಅಪ್ಪಟ ಜಾತ್ಯಾತೀತ, ಜನಪರ ಜಾತ್ರೆ ಎಂಬುದನ್ನು ಶ್ರೀಗಳು ನಿರೂಪಿಸಿದರು. ಪುಸ್ತಕಗಳನ್ನು ಬಿಡುಗಡೆಗೊಳಿಸಿ, ವಿಚಾರಗೋಷ್ಠಿಗಳನ್ನು ಏರ್ಪಡಿಸಿ ಹೊಟ್ಟೆಯ ಜೊತೆಗೆ ಜ್ಞಾನದ ಹಸಿವನ್ನೂ ಹಿಂಗಿಸಿದ ಶ್ರೀಗಳು, ಕೃಷಿಮೇಳ, ಆರೋಗ್ಯ ತಪಾಸಣೆ-ಚಿಕಿತ್ಸೆ, ಪರಿಸರೋತ್ಸವ, ಜಾಗೃತಿ ಕಾರ್ಯಕ್ರಮ, ರಕ್ತದಾನ-ನೇತ್ರದಾನ ಅಭಿಯಾನ, ಸಾಂಸ್ಕೃತಿಕ-ಜನಪದ ವೈಭವ, ದೇಸಿ ಕ್ರೀಡೆಗಳು ಹೀಗೆ ಹಲವಾರು ಸೃಜನಶೀಲ-ವಿಧಾಯಕ ಕಾರ್ಯಕ್ರಮಗಳನ್ನು ನಾಡಿನ ಗಮನ ಸೆಳೆಯುವಂತೆ ಯಶಸ್ವಿಯಾಗಿ ನೆರವೇರಿಸಿದರು.

ಜಾತ್ರೆ ಎಂದರೆ ತೇರಿನ ಕಳಸಕ್ಕೆ ಉತ್ತತ್ತಿ-ಬಾಳೆಹಣ್ಣು ಎಸೆಯುವುದು, ತೇರಿನ ಚಕ್ರಕ್ಕೆ ಅನ್ನ ಹಾಕುವುದು, ಬೆಂಕಿಯಲ್ಲಿ ಹಾರುವುದು, ಉರುಳು ಸೇವೆ ಮಾಡುವುದು, ಶಸ್ತ್ರ ಚುಚ್ಚಿಸಿಕೊಳ್ಳುವುದು ಎಂಬ ಕಲ್ಪನೆಯೇ ಮಾಯವಾಗುವಂತೆ ತೋಂಟದಾರ್ಯ ಜಾತ್ರೆಯನ್ನು ಶ್ರೀಗಳು ಸಂಘಟಿಸಿ ತೋರಿಸಿದರು. ಇಂಥ ಪೂಜ್ಯರು ಹಾಕಿಕೊಟ್ಟ ವೈಚಾರಿಕ ಮಾರ್ಗದಲ್ಲಿ ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ಮಾರ್ಗದರ್ಶನದೊಂದಿಗೆ ತೋಂಟದಾರ್ಯ ಮಠದ ಜಾತ್ರೆಯು ತನ್ನ ಪರಂಪರೆಯನ್ನು ಅನೂಚಾನವಾಗಿ ಮುಂದುವರೆಸುತ್ತಾ ಸಾಗಿದ್ದು, ಅದರಂತೆ ಏಪ್ರಿಲ್ 23, ಮಂಗಳವಾರ ಸಾಯಂಕಾಲ 6:30 ಗಂಟೆಗೆ ಚಿತ್ತಾ ನಕ್ಷತ್ರದಲ್ಲಿ ಮಹಾ ರಥೋತ್ಸವ ನೆರವೇರಲಿದೆ.

ಸಂಜೆ 7.30ಕ್ಕೆ ಶ್ರೀಮಠದಲ್ಲಿ ನೆರವೇರುವ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿಯವರ ಜೀವನ ಸಾಧನೆಗಳ ಕುರಿತು ಡಾ. ಎಂ.ಎಂ. ಕಲಬುರ್ಗಿ ಅಧ್ಯಯನ ಸಂಸ್ಥೆಯಿಂದ 'ದಿಟ್ಟ ಹೆಜ್ಜೆ' ಹಾಗೂ 'ಮೈಲುಗಲ್ಲುಗಳೇ ಮಾತನಾಡುತ್ತವೆ' ಎಂಬ ಎರಡು ಅಮೂಲ್ಯ ಗ್ರಂಥಗಳು ಲೋಕಾರ್ಪಣೆಗೊಳ್ಳಲಿವೆ. ಸಿದ್ಧಯ್ಯನಕೋಟೆ ವಿಜಯಮಹಾಂತೇಶ್ವರ ಶಾಖಾಮಠದ ಬಸವಲಿಂಗ ಮಹಾಸ್ವಾಮಿಗಳನ್ನು ಪೀಠಾರೋಹಣದ ನಿಮಿತ್ತ ಸಂಮಾನಿಸಲಾಗುವುದು. ಧಾರವಾಡದ ನಾಗರತ್ನ ಹಡಗಲಿಯವರ ಋತಿಕಾ ನೃತ್ಯ ಕಲಾನಿಕೇತನ ತಂಡದವರು ವಚನ ನೃತ್ಯ ವೈಭವ ಪ್ರದರ್ಶಿಸುವರು. ಈ ಎಲ್ಲಾ ಕಾರ್ಯಕ್ರಮಗಳಲ್ಲಿ ಶ್ರೀಮಠದ ಸದ್ಭಕ್ತರು ಹಾಗೂ ಆಸಕ್ತರು ಪಾಲ್ಗೊಳ್ಳಲು ಬಿನ್ನಹ.

**-ವೀರೇಶ ಎಂ.ಹರ್ಲಾಪೂರ.**
ಜ. ತೋಂಟದಾರ್ಯ ಜಾತ್ರಾ ಪ್ರಚಾರ ಸಮಿತಿ ಅಧ್ಯಕ್ಷರು.

### ವಾರದೊಳಗೆ ಬರ ಪರಿಹಾರ ಬಿಡುಗಡೆಗೆ ಕೇಂದ್ರ ಸರ್ಕಾರ ಒಪ್ಪಿಗೆ: ಹೋರಾಟ ಯಶಸ್ವಿ: ಸಿಎಂ ಸಿದ್ದರಾಮಯ್ಯ




■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದ ರೈತರಿಗೆ ಒಂದು ವಾರದೊಳಗೆ ಬರ ಪರಿಹಾರ ಬಿಡುಗಡೆಗೆ ನಿರ್ಧಾರ ಕೈಗೊಳ್ಳಲಾಗುವುದು ಎಂದು ಕೇಂದ್ರ ಸರ್ಕಾರ ಸುಪ್ರೀಂ ಕೋರ್ಟ್ ನಲ್ಲಿ ಇಂದು ಒಪ್ಪಿಕೊಂಡಿದೆ.

ಕರ್ನಾಟಕಕ್ಕೆ ಬರ ಪರಿಹಾರ ನಿಧಿ ಬಂದಿಲ್ಲ. ಹೀಗಾಗಿ ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ರಾಜ್ಯ ಕಾಂಗ್ರೆಸ್ ಸರ್ಕಾರ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು. ಈ ಅರ್ಜಿಯನ್ನು ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿ ಬಿ.ಆರ್. ಗವಾಯಿ ನೇತೃತ್ವದ ದ್ವಿಸದಸ್ಯ ಪೀಠ ಇಂದು ವಿಚಾರಣೆ ನಡೆಸಿತು.

ಏಪ್ರಿಲ್ 29ರೊಳಗೆ ಒಳಗೆ ಬರ ಪರಿಹಾರ ಬಿಡುಗಡೆ ಮಾಡುತ್ತೇವೆ ಎಂದು ಕೇಂದ್ರ ಸರ್ಕಾರದ ಪರ ಅಟಾರ್ನಿ ಜನರಲ್ ವೆಂಕಟರಮಣಿ ನ್ಯಾಯ ಪೀಠಕ್ಕೆ ಹೇಳಿದರು. ಇನ್ನು ಹಿರಿಯ ವಕೀಲರ ಅಲಭ್ಯತೆ ಹಿನ್ನೆಲೆಯಲ್ಲಿ ವಿಚಾರಣೆ ಮುಂದೂಡುವಂತೆ ರಾಜ್ಯ ಸರಕಾರದ ಪರ ವಕೀಲರು ಕೇಳಿಕೊಂಡರು. ವಾದ-ಪ್ರತಿವಾದವನ್ನು ಆಲಿಸಿದ ದ್ವಿಸದಸ್ಯ ನ್ಯಾಯಪೀಠ ವಿಚಾರಣೆಯನ್ನು ಏಪ್ರಿಲ್ 29ಕ್ಕೆ ಮುಂದೂಡಿತು.

### ವಿಜಯಪುರ: ಐತಿಹಾಸಿಕ ಸ್ಮಾರಕಕ್ಕಿಲ್ಲ 'ಲೈಟ್ನಿಂಗ್ ಅರೆಸ್ಟರ್ ವ್ಯವಸ್ಥೆ'; ಸಿಡಿಲು ಬಡಿದು ಮೆಹತರ್ ಮಹಲ್ ಮಿನಾರ್‌ಗೆ ಹಾನಿ

■ವಿಜಯಸಾಕ್ಷಿ ಸುದ್ದಿ, ವಿಜಯಪುರ



ಇಲ್ಲಿನ ಜುಮ್ಮಾ ಮಸೀದಿ ರಸ್ತೆಯಲ್ಲಿರುವ ಆದಿಲ್ ಶಾಹಿ ಅರಸರ ಕಾಲದ ಐತಿಹಾಸಿಕ ಸ್ಮಾರಕ ಮೆಹತರ್ ಮಹಲ್‌ಗೆ ಗುರುವಾರ ಸಂಜೆ ಸಿಡಿಲು ಬಡಿದು, ಮಿನಾರ್‌ನ ಗೋಪುರಕ್ಕೆ ಹಾನಿಯಾಗಿದ್ದು, ಈ ಘಟನೆಯ ಬೆನ್ನಲ್ಲೇ ವಿಜಯಪುರದ ಯಾವುದೇ ಪುರಾತನ ಸ್ಮಾರಕಗಳಲ್ಲಿ ಲೈಟ್ನಿಂಗ್ ಅರೆಸ್ಟರ್ ವ್ಯವಸ್ಥೆ ಇಲ್ಲದಿರುವುದು, ಕಾರ್ಯನಿರ್ವಹದೇ ಇರುವ ಮಾಹಿತಿ ಬೆಳಕಿಗೆ ಬಂದಿದೆ.

ಸಿಡಿಲಿನ ಬಡಿತಕ್ಕೆ ಗೋಪುರಕ್ಕೆ ಅಷ್ಟೇ ಅಲ್ಲದೆ, ಮಹಲ್ ಎದುರು ರಸ್ತೆಯಲ್ಲಿ ನಿಲ್ಲಿಸಿದ್ದ ಒಂದು ಕಾರು, ಎರಡು ಬೈಕುಗಳೂ ಕೂಡ ಜಖಂಗೊಂಡಿದೆ. ಈ ಸಂದರ್ಭದಲ್ಲಿ ಸ್ಥಳದಲ್ಲಿ ಯಾರೂ ಇರದ ಕಾರಣ ಭಾರೀ ಅನಾಹುತ ತಪ್ಪಿದೆ.

ಹಾನಿಗೊಳಗಾಗಿರುವ ಸ್ಮಾರಕದಲ್ಲಿ ಲೈಟ್ನಿಂಗ್ ಅರೆಸ್ಟರ್ ವ್ಯವಸ್ಥೆ ಅಳವಡಿಸಿರಲಿಲ್ಲ ಎಂಬುದನ್ನು ಭಾರತೀಯ ಪುರಾತತ್ವ ಸರ್ವೇಕ್ಷಣೆಯ (ಎಎಸ್‌ಐ) ಅಧಿಕಾರಿ ಒಪ್ಪಿಕೊಂಡಿದ್ದಾರೆ.

ಗೋಳಗುಮ್ಮಟ ಮತ್ತು ಇಬ್ರಾಹಿಂ ರೋಜಾ ಸೇರಿದಂತೆ ಹೆಚ್ಚಿನ ಪ್ರಾಚೀನ ಸ್ಮಾರಕಗಳಲ್ಲಿ ಲೈಟ್ನಿಂಗ್ ಅರೆಸ್ಟರ್ ವ್ಯವಸ್ಥೆ ಇಲ್ಲ ಎಂದು ಹೇಳಿದ್ದಾರೆ.

10 ವರ್ಷಗಳ ಹಿಂದೆ ವಿಜಯಪುರದಲ್ಲಿ ಎಎಸ್‌ಐ ವ್ಯಾಪ್ತಿಯಲ್ಲಿ ಬರುವ ಶೇ.90ರಷ್ಟು ಸ್ಮಾರಕಗಳಲ್ಲಿ ಎಎಸ್‌ಐ ಲೈಟ್ನಿಂಗ್ ಅರೆಸ್ಟರ್ ವ್ಯವಸ್ಥೆ ಅಳವಡಿಸಿತ್ತು. ಆದರೆ, ಇದರ ತಾಮ್ರದ ತಂತಿಗಳನ್ನು ಕದ್ದೊಯ್ದಿದ್ದಾರೆ. ಇದರಿಂದ ಯಂತ್ರಗಳ ಕಾರ್ಯನಿರ್ವಹಣೆ ಸ್ಥಗಿತಗೊಂಡಿದೆ. ವಿಜಯದಲ್ಲಿ 81 ಸ್ಮಾರಕಗಳು ಎಎಸ್‌ಐ ವ್ಯಾಪ್ತಿಗೆ ಬರುತ್ತಿದೆ ಎಂದು ತಿಳಿಸಿದ್ದಾರೆ.

ಸ್ಮಾರಕಗಳಿಗೆ ಹಾನಿಯುಂಟು ಮಾಡುವಷ್ಟು ಅಬ್ಬರ ಸಿಡಿಲು ವಿಜಯಪುರದಲ್ಲಿ ಬರುತ್ತದೆ ಎಂದು ನಿರೀಕ್ಷಿಸಿರಲಿಲ್ಲ. ಘಟನೆ ಬಳಿಕ ಉನ್ನತಾಧಿಕಾರಿಗಳಿಗೆ ಸಂದೇಶ ರವಾನಿಸಲಾಗಿದೆ. ಸ್ಮಾರಕಗಳಿಗೆ ಲೈಟ್ನಿಂಗ್ ಅರೆಸ್ಟರ್ ವ್ಯವಸ್ಥೆ ಅಳವಡಿಸುವಂತೆ ಮನವಿ ಮಾಡಿದ್ದೇವೆಂದು ಹೇಳಿದ್ದಾರೆ.

# ನೆಮ್ಮದಿಯ ಬದುಕು ಎಲ್ಲರದಾಗಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಅಹಿಂಸಾ ಪರಮೋಧರ್ಮ, ಬದುಕು-ಬದುಕಲು ಬಿಡು ಎಂಬ ಸತ್ಯ ಸಂದೇಶವನ್ನು ಜಗತ್ತಿಗೆ ನೀಡಿದ ಭಗವಾನ್ ಮಹಾವೀರರ ಜಯಂತ್ಯುತ್ಸವದ ಅಂಗವಾಗಿ ಭಾನುವಾರ ಪಟ್ಟಣದಲ್ಲಿ ಭಗವಾನ್ ಮಹಾವೀರ ಜಯಂತಿಯನ್ನು ಜೈನ ಧರ್ಮೀಯರು ಶ್ರದ್ಧಾ ಭಕ್ತಿಯಿಂದ ಆಚರಿಸಿದರು.

ಪಟ್ಟಣದ ಅನಂತನಾಥ ಬಸದಿಯಿಂದ ಭಗವಾನ್ ಮಹಾವೀರ ಭಾವಚಿತ್ರ ಮೆರವಣಿಗೆ ಹೊರಟು ಪಟ್ಟಣದ ಪ್ರಮುಖ ರಸ್ತೆಗಳ ಮೂಲಕ ಶಂಖ ಬಸದಿಗೆ ತಲುಪಿತು. ಈ ಸಂದರ್ಭದಲ್ಲಿ ಮಹಿಳೆಯರು, ಮಕ್ಕಳು, ಪುರುಷರು ಭಕ್ತಿಯಿಂದ ಮಹಾವೀರರ ಕುರಿತ ಹಾಡು ಹೇಳುತ್ತ, ಕುಣಿಯುತ್ತ ಸಾಗಿದರು. ಬೆಳಿಗ್ಗೆ ಭಗವಾನ್ ಮಹಾವೀರ ಸ್ವಾಮಿಯ ತೊಟ್ಟಿಲೋತ್ಸವ ಮತ್ತು 24 ತೀರ್ಥಂಕರರ ನಾಮಗಳನ್ನು ಸ್ತುತಿಸಲಾಯಿತು.

ಮೆರವಣಿಗೆ ಬಳಿಕ ಬಸದಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಜೈನ ಸಮಾಜದ ಅಧ್ಯಕ್ಷ ಭರತರಾಜ ಬರಿಗಾಲಿ, ಭಗವಾನ್ ಮಹಾವೀರರು ಜಗತ್ತಿನ ಜೀವರಾಶಿಗಳಿಗೆ ಸತ್ಯ, ಅಹಿಂಸೆ, ಪವಿತ್ರತೆ, ಅನುಬಂಧಗಳಿಂದ ಕೂಡಿದ ಧರ್ಮ ಮಾರ್ಗಗಳನ್ನು ಅರುಹಿ ಜೀವನ್ಮುಕ್ತಿ ಮಾರ್ಗ ತೋರಿದ್ದಾರೆ. ಅವರು ಮಾನವ ಕುಲಕೋಟಿಯ ಉದ್ಧಾರಕ್ಕಾಗಿ ತೋರಿದ ಜೀವನ ಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡು ನೆಮ್ಮದಿಯ ಬದುಕನ್ನು ನಮ್ಮೆಲ್ಲರದಾಗಿಸಿಕೊಳ್ಳೋಣ ಎಂದರು.

ಈ ಸಂದರ್ಭದಲ್ಲಿ ಸಂತೋಷ ಗೋಗಿ, ಮಹಾವೀರ ಬರಿಗಾಲಿ, ವೈಭವ ಗೋಗಿ, ಜಯಣ್ಣ ಗೋಗಿ, ನಂದಕುಮಾರ್ ಪಾಟೀಲ, ಪದ್ಮಕಿರಣ ಬರಿಗಾಲಿ, ಆದಿನಾಥ ಬರಿಗಾಲಿ, ಭರತ್ ಪಾಟೀಲ, ಮಹಾವೀರ ಪಂಡಿತ, ಸನ್ಮತಿ ಗೋಗಿ, ವಿರೇಂದ್ರ ಘೋಂಗಡಿ, ಆಕಾಶ ಗೋಗಿ ಸೇರಿದಂತೆ ಜೈನ ಸಮಾಜ ಬಾಂಧವರು ಪಾಲ್ಗೊಂಡಿದ್ದರು.

# ನೇಹಾ ಹತ್ಯೆ ಆರೋಪಿಗೆ ಗಲ್ಲು ಶಿಕ್ಷೆಗೆ ಆಗ್ರಹ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಹುಬ್ಬಳ್ಳಿಯ ಬಿವಿಬಿ ಕಾಲೇಜಿನ ಕ್ಯಾಂಪಸ್‌ಗೆ ನುಗ್ಗಿ ಅಮಾಯಕ ಹಿಂದೂ ಸಹೋದರಿ ನೇಹಾ ಹಿರೇಮಠರನ್ನು ಬರ್ಬರವಾಗಿ ಹತ್ಯೆಗೈದ ಆರೋಪಿ ಫಯಾಜ್‌ಗೆ ಗಲ್ಲುಶಿಕ್ಷೆ ವಿಧಿಸಬೇಕೆಂದು ಹಿಂದೂ ಪರ ಸಂಘಟನೆಗಳು ಹಾಗೂ ಬಿಜೆಪಿ ಕಾರ್ಯಕರ್ತರು ತಹಸೀಲ್ದಾರರ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಿ.ಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ, ಬಿಜೆಪಿ ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ, ರಾಜೀವರೆಡ್ಡಿ ಬಮ್ಮನಕಟ್ಟಿ, ಬಿಜೆಪಿ ಜಿಲ್ಲಾ ಪ್ರ.ಕಾ. ಫಕ್ಕೀರೇಶ ರಟ್ಟಿಹಳ್ಳಿ ಮಾತನಾಡಿ, ಇದೊಂದು ನಾಗರಿಕ ಸಮಾಜ ತಲೆ ತಗ್ಗಿಸುವ ಕೃತ್ಯವಾಗಿದ್ದು, ಹತ್ಯೆಗೈದ ಆರೋಪಿಗೆ ಕಾಲಹರಣ ಮಾಡದೇ ಶೀಘ್ರವೇ ಉಗ್ರ ಶಿಕ್ಷೆ ವಿಧಿಸಬೇಕು. ಹೆಣ್ಣು ಮಕ್ಕಳು ಕಾಲೇಜಿಗೆ ಹೋಗದಂತಹ ವಾತಾವರಣ ನಿರ್ಮಾಣವಾಗುತ್ತಿದೆ. ಇಂತಹ ಘಟನೆಗಳು ಮರುಕಳಿಸದಂತೆ ಸರಕಾರ ಎಚ್ಚರಿಕೆ ವಹಿಸಬೇಕು ಎಂದು ಆಗ್ರಹಿಸಿದರು.

ಪ.ಪಂ ಸದಸ್ಯ ಸಂದೀಪ ಕಪ್ಪತ್ತನವರ, ಪ್ರವೀಣಗೌಡ ಪಾಟೀಲ, ಯಲ್ಲಪ್ಪ ಇಂಗಳಗಿ, ಶಂಕರ ಮರಾಠೆ, ರಾಮಣ್ಣ ಕಂಬಳಿ, ರಾಜು ಹಲಸೂರ, ವೀರಣ್ಣ ಅಂಗಡಿ, ಪರಶುರಾಮ ಡೊಂಕಬಳ್ಳಿ, ಸುರೇಶ ಅಕ್ಕಿ, ಮಲ್ಲು ಕಬಾಡಿ, ಶಿವಣ್ಣ ಚಕ್ರಸಾಲಿ, ನಟರಾಜ ರಾನಡೆ, ಉಮೇಶ ಶೇಳಕೆ, ಬಸವರಾಜ ವಡವಿ, ಅಶೋಕ ವರವಿ, ಗೌತಮ ಕಪ್ಪತ್ತನವರ, ಮಂಜು ಸೊಂಟನೂರ, ಬಿಜೆಪಿ ಮಹಿಳಾ ತಾಲೂಕಾಧ್ಯಕ್ಷೆ ನಂದಾ ಪಲ್ಲೇದ, ಅನಿಲ ಮುಳಗುಂದ, ಶರಣಪ್ಪ ಹೊಸೂರ, ಸುರೇಶ ಅಕ್ಕಿ, ಅಕ್ಬರಸಾಬ ಯಾದಗಿರಿ, ಜಗದೀಶ ತೇಲಿ, ಸಂಜೀವ ಚವ್ಹಾಣ, ಶ್ರೀನಿವಾಸ ಬಾರಬಾರ, ಶರಣಪ್ಪ ಮಡಿವಾಳರ, ಶರಣಪ್ಪ ಸಿಂಧೆ ಮುಂತಾದವರು ಉಪಸ್ಥಿತರಿದ್ದರು.

### ಕಾಂಗ್ರೆಸ್ ಪಕ್ಷ ಗ್ಯಾರಂಟಿ ಕಾರ್ಡ್ ವಿತರಿಸದಂತೆ ಚುನಾವಣಾ ಆಯೋಗಕ್ಕೆ ಜೆಡಿಎಸ್ ದೂರು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು


ಲೋಕಸಭೆ ಚುನಾವಣೆಯಲ್ಲಿ ಗ್ಯಾರಂಟಿ ಕಾರ್ಡ್ ವಿತರಿಸುವ ಮೂಲಕ ಕಾಂಗ್ರೆಸ್ ಪಕ್ಷ ಮತದಾರರಿಗೆ ಆಮಿಷ ಒಡ್ಡುತ್ತಿದೆ, ಇದನ್ನು ನಿರ್ಬಂಧಿಸಬೇಕೆಂದು ಒತ್ತಾಯಿಸಿ ಜೆಡಿಎಸ್ ನಿಯೋಗ ಚುನಾವಣಾ ಆಯೋಗಕ್ಕೆ ದೂರು ನೀಡಿದೆ.

ಚುನಾವಣಾ ಸಮಿತಿಗೆ ಪತ್ರ ಬರೆದಿರುವ ಜೆಡಿಎಸ್ ರಾಜ್ಯಾಧ್ಯಕ್ಷ ಮತ್ತು ಮಾಜಿ ಮುಖ್ಯಮಂತ್ರಿ ಎಚ್‌ಡಿ ಕುಮಾರಸ್ವಾಮಿ, ಕಾಂಗ್ರೆಸ್ ಲೋಕಸಭೆ ಚುನಾವಣೆಗೆ ಪ್ರಣಾಳಿಕೆಯನ್ನು ಪ್ರಕಟಿಸಿದೆ ಮತ್ತು ಬಿಡುಗಡೆ ಮಾಡಿದೆ . ಚುನಾವಣಾ ಪ್ರಣಾಳಿಕೆಯಲ್ಲಿ ಐದು ನ್ಯಾಯಗಳನ್ನು ಕೇಂದ್ರೀಕರಿಸಿದೆ. 25 ಗ್ಯಾರಂಟಿಗಳನ್ನು ಒಳಗೊಂಡಿದೆ.



### ಬಿಜೆಪಿಯಿಂದ ಮಾಜಿ ಡಿಸಿಎಂ ಕೆಎಸ್ ಈಶ್ವರಪ್ಪ ಉಚ್ಚಾಟನೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಹಾಗೂ ಬಿಜೆಪಿ ವಿರುದ್ಧ ಸೆಡ್ಡು ಹೊಡೆದು ಶಿವಮೊಗ್ಗ ಲೋಕಸಭೆ ಚುನಾವಣೆಯಿಂದ ಪಕ್ಷೇತ್ತರ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿರುವ ಮಾಜಿ ಡಿಸಿಎಂ ಕೆಎಸ್ ಈಶ್ವರಪ್ಪರನ್ನು ಪಕ್ಷದಿಂದ ಉಚ್ಚಾಟಿಸಲಾಗಿದೆ.

ಶಿವಮೊಗ್ಗ ಲೋಕಸಭೆ ಚುಮಾವಣೆಯಿಂದ ನಾಮಪತ್ರ ವಾಪಸ್ ಪಡೆಯುವಂತೆ ಈಶ್ವರಪ್ಪ ಅವರಿಗೆ ಡೆಡ್ ಲೈನ್ ನೀಡಲಾಗಿತ್ತು. ಆದರೆ ಅವರು ನಾಮಪತ್ರ ಹಿಂಪಡೆಯದ ಕಾರಣ ರಾಜ್ಯ ಬಿಜೆಪಿ ಶಿಸ್ತು ಸಮಿತಿ ಕೆಎಸ್ ಈಶ್ವರಪ್ಪ ಅವರನ್ನು ಆರು ವರ್ಷಗಳ ಕಾಲ ಪಕ್ಷದಿಂದ ಉಚ್ಚಾಟನೆ ಮಾಡಿದ್ದಾರೆ.

ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಅವರಿಗೆ ಸೆಡ್ಡು ಹೊಡೆದು, ಅವರ ಪುತ್ರ ಬಿವೈ ರಾಘವೇಂದ್ರ ವಿರುದ್ಧ ಬಂಡಾಯ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದ ಮಾಜಿ ಡಿಸಿಎಂ ಕೆಎಸ್ ಈಶ್ವರಪ್ಪ ಅವರು ಕೊನೆ ಕ್ಷಣದಲ್ಲಿ ನಾಮಪತ್ರ ವಾಪಸ್ ಪಡೆಯಬಹುದು ಎಂಬ ಬಿಜೆಪಿ ನಾಯಕರ ನಿರೀಕ್ಷೆ ಹುಸಿಯಾಗಿದೆ. ನಾಮಪತ್ರ ವಾಪಸ್ ಪಡೆಯದೇ ಕಣದಲ್ಲಿ ಉಳಿದಿರುವ ಕೆಎಸ್ ಈಶ್ವರಪ್ಪ ಅವರಿಗೆ ಚುನಾವಣಾ ಆಯೋಗ ಇಂದು ಚುನಾವಣಾ ಚಿಹ್ನೆ ನೀಡಿದೆ. ಕಬ್ಬಿನ ಜೊತೆ ಕೈ ಕಟ್ಟಿಕೊಂಡ ನಿಂತ ರೈತನ ಚಿಹ್ನೆಯನ್ನು ಈಶ್ವರಪ್ಪ ಅವರಿಗೆ ನೀಡಲಾಗಿದೆ.

ಬಿಎಸ್ ವೈ ಪುತ್ರನ ವಿರುದ್ಧ ಸೆಡ್ಡು: ಕಣದಲ್ಲಿ ಉಳಿದ ಈಶ್ವರಪ್ಪಗೆ ರೈತನ ಚಿಹ್ನೆ ನೀಡಿದ ಆಯೋಗ

ಶಿವಮೊಗ್ಗ ಲೋಕಸಭಾ ಕ್ಷೇತ್ರದಲ್ಲಿ ಮೂವರು ಪಕ್ಷೇತರ ಅಭ್ಯರ್ಥಿಗಳು ತಮ್ಮ ನಾಮಪತ್ರ ಹಿಂಪಡೆದಿದ್ದು, ಅಂತಿಮವಾಗಿ ಈಶ್ವರಪ್ಪ ಸೇರಿದಂತೆ 23 ಅಭ್ಯರ್ಥಿಗಳು ಚುನಾವಣಾ ಕಣದಲ್ಲಿ ಇದ್ದಾರೆ.

ಬಿಜೆಪಿಯಿಂದ ಹಾಲಿ ಸಂಸದ ಬಿ.ವೈ. ರಾಘವೇಂದ್ರ, ಕಾಂಗ್ರೆಸ್ ನಿಂದ ಖ್ಯಾತ ನಟ ಶಿವರಾಜ್ ಕುಮಾರ್ ಅವರ ಪತ್ನಿ ಗೀತಾ ಶಿವರಾಜಕುಮಾರ್ ಅವರು ಸ್ಪರ್ಧಿಸಿದ್ದಾರೆ. ಇನ್ನು ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದಿಂದ ಎಸ್.ಕೆ. ಪ್ರಭು, ಉತ್ತಮ ಪ್ರಜಾಕೀಯ ಪಕ್ಷದ ಅಭ್ಯರ್ಥಿಯಾಗಿ ಅರುಣ ಕೆ.ಎ, ಬಹುಜನ ಸಮಾಜವಾದಿ ಪಾರ್ಟಿಯಿಂದ ಎ.ಡಿ. ಶಿವಪ್ಪ, ಯಂಗ್‌ಸ್ಟರ್ ಎಂಪರ್ಮೆಂಟ್ ಪಾರ್ಟಿಯಿಂದ ಯೂಸುಫ್ ಖಾನ್ ಕಣದಲ್ಲಿದ್ದಾರೆ.

### ನೇಹಾ ಹಿರೇಮಠ್ ಹತ್ಯೆ ಪ್ರಕರಣ ತನಿಖೆ ಸಿಐಡಿಗೆ ಹಸ್ತಾಂತರ, ವಿಶೇಷ ಕೋರ್ಟ್ ಸ್ಥಾಪನೆ : ಸಿಎಂ ಸಿದ್ದರಾಮಯ್ಯ




■ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ

ಹುಬ್ಬಳ್ಳಿ ವಿದ್ಯಾರ್ಥಿನಿ ನೇಹಾ ಹಿರೇಮಠ್ ಹತ್ಯೆ ಪ್ರಕರಣವನ್ನು ಅಪರಾಧ ತನಿಖಾ ಇಲಾಖೆ ಸಿಐಡಿಗೆ ಹಸ್ತಾಂತರಿಸಲು ಸರ್ಕಾರ ನಿರ್ಧರಿಸಿದ್ದು, ಪ್ರಕರಣದ ಶೀಘ್ರ ಇತ್ಯರ್ಥಕ್ಕಾಗಿ ವಿಶೇಷ ನ್ಯಾಯಾಲಯವನ್ನು ಸ್ಥಾಪಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೋಮವಾರ ಹೇಳಿದ್ದಾರೆ.

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಕಾಂಗ್ರೆಸ್ ಕೌನ್ಸಿಲರ್ ನಿರಂಜನ ಹಿರೇಮಠ ಅವರ ಪುತ್ರಿ ನೇಹಾ ಹಿರೇಮಠ (23ವ) ಅವರನ್ನು ಕಳೆದ ಗುರುವಾರ ಹುಬ್ಬಳ್ಳಿಯ ಬಿವಿಬಿ ಕಾಲೇಜು ಆವರಣದಲ್ಲಿ ಫಯಾಜ್ ಖೋಂಡುನಾಯ್ಕ್ ಎಂಬಾತ ಚಾಕುವಿನಿಂದ ಇರಿದು ಕೊಲೆ ಮಾಡಿದ್ದನು.

ಬಳಿಕ ಸ್ಥಳದಿಂದ ಪರಾರಿಯಾಗಿದ್ದ ಆತನನ್ನು ಪೊಲೀಸರು ಬಂಧಿಸಿದ್ದರು.

**ಗುಡುಗು-ಸಿಡಿಲು ಹಾನಿಯಿಂದ ಸಂರಕ್ಷಣೆಗೆ ಅನುಸರಿಸಬೇಕಾದ ಅಗತ್ಯ ಕ್ರಮಗಳು**

# ಮುನ್ನೆಚ್ಚರಿಕೆಯಿಂದ ಜೀವ ಹಾನಿ ತಪ್ಪಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಗುಡುಗು-ಸಿಡಿಲಿನಿಂದ ಸಂಭವಿಸಬಹುದಾದ ಹಾನಿಯಿಂದ ಸಂರಕ್ಷಣೆಗೆ ಅಗತ್ಯ ಕ್ರಮ ಅನುಸರಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ತಿಳಿಸಿದ್ದಾರೆ.

ಸಾಮಾನ್ಯವಾಗಿ ಮೇ ತಿಂಗಳಿನಲ್ಲಿ ಕಂಡುಬರುವ ಮಳೆಗಾಲದ ಆರಂಭದ ಹಂತದಲ್ಲಿ ತೀವ್ರತರದ ಗುಡುಗು-ಸಿಡಿಲು ಕಂಡುಬರುವುದು ಸಾಮಾನ್ಯವಾಗಿದ್ದು, ಜೊತೆಗೆ ಬಿರುಸಾಗಿ ಗಾಳಿ ಸಹಿತ ಮಳೆ ಸುರಿಯುವುದು ವಾಡಿಕೆಯಾಗಿದೆ. ಈ ಹಿನ್ನೆಲೆಯಲ್ಲಿ ಬಯಲು ಪ್ರದೇಶಗಳಲ್ಲಿ, ಗಿಡಗಳ ಕೆಳಗಡೆ ಅಥವಾ ಕಬ್ಬಿಣದಿಂದ ಕೂಡಿರುವ ಕಟ್ಟಡ ಅಥವಾ ಶೆಡ್‌ಗಳಲ್ಲಿ ಆಶ್ರಯ ಪಡೆಯದೇ ಸೂಕ್ತ ಸ್ಥಳದಲ್ಲಿ ಇದ್ದು, ಜೀವ ಹಾನಿ ತಪ್ಪಿಸಬೇಕು ಎಂದು ಅವರು ಸಾರ್ವಜನಿಕರಿಗೆ ತಿಳಿಸಿದ್ದಾರೆ.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಕಾಲಕಾಲಕ್ಕೆ ನೀಡುವ ಸೂಚನೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಆರೋಗ್ಯದ ದೃಷ್ಟಿಯಿಂದ ನೀಡುವ ಸಲಹೆಗಳನ್ನು ಅನುಸರಿಸಿ ವಿಪತ್ತಿನಿಂದ ರಕ್ಷಿಸಿಕೊಳ್ಳಲು ಕೈಜೋಡಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಕೈಗೊಳ್ಳಬೇಕಾದ ಕ್ರಮಗಳು:** ಗುಡುಗು-ಮಿಂಚು ಬರಲಿದೆ ಎಂದು ಗೊತ್ತಾದಾಗ ಬಯಲಿನಲ್ಲಿ ನಿಲ್ಲದೆ, ತಗ್ಗು ಪ್ರದೇಶಕ್ಕೆ ಹೋಗಿ ಕುಳಿತುಕೊಳ್ಳಬೇಕು. ತಗ್ಗು ಪ್ರದೇಶ ಇಲ್ಲದೇ ಬಯಲಿನಲ್ಲಿಯೇ ಇರಬೇಕಾದರೆ ತಲೆಯನ್ನು ಮೊಣಕಾಲುಗಳ ನಡುವೆ ಹುದುಗಿಸಿಕೊಳ್ಳಬೇಕು. ಇದು ಮಿಂಚಿನಿಂದ ಮೆದುಳಿಗೂ, ಹೃದಯಕ್ಕೂ ಆಗುವ ಹಾನಿಯನ್ನು ತಪ್ಪಿಸುತ್ತದೆ.

ಮರಗಳಿದ್ದ ಪ್ರದೇಶದಲ್ಲಿದ್ದರೆ ಅಲ್ಲಿಂದ ಬೇಗನೆ ಹೊರಬರುವುದು ಒಳ್ಳೆಯದು. ಸಿಡಿಲು ಮೋಡದಿಂದ ಭೂಮಿಗೆ ಹರಿಯಲು ಮರದಂತಹ ಹಸಿ, ಒದ್ದೆ ವಸ್ತುವನ್ನೇ ಆರಿಸಿಕೊಳ್ಳುತ್ತದೆ. ಎತ್ತರದ ಗುಡ್ಡದ ಮೇಲಿದ್ದರೆ ತಗ್ಗಿಗೆ ಇಳಿಯಬೇಕು, ಕುರಿಮಂದೆ ಅಥವಾ ಜಾನುವಾರುಗಳ ನಡುವೆ ನಿಂತಿದ್ದರೆ ಅವುಗಳ ಮಧ್ಯದಲ್ಲಿ ಬಗ್ಗಿ ಕುಳಿತುಕೊಳ್ಳಿ, ಏಕೆಂದರೆ ಮಿಂಚು ಪ್ರಾಣಿಗಳಿಗಿಂತ ಎತ್ತರವಿರುವ ಮನುಷ್ಯನನ್ನೇ ಆರಿಸಿಕೊಳ್ಳುತ್ತದೆ.

ಕೆರೆಯಲ್ಲಿ ಈಜುವುದು, ಸ್ನಾನ ಮಾಡುವುದು ಬೇಡ. ನೀರಿನಲ್ಲಿದ್ದರೆ ತಕ್ಷಣ ಹೊರಬನ್ನಿ.

> ಮನೆಯ ಕಿಟಕಿಯ ಬಳಿ ನಿಲ್ಲುವುದಕ್ಕಿಂತಲೂ ಮನೆಯ ಮಧ್ಯದಲ್ಲಿರುವುದು ಸುರಕ್ಷಿತ. ಗುಡುಗು-ಸಿಡಿಲಿನ ಸಂದರ್ಭದಲ್ಲಿ ಫೋನ್‌ನಲ್ಲಿ ಮಾತನಾಡಬಾರದು, ಅದನ್ನು ಚಾರ್ಜ್ ಮಾಡುವ ಸಾಹಸವೂ ಬೇಡ. ಕಾರಿನಲ್ಲಿ ಪ್ರಯಾಣಿಸುತ್ತಿದ್ದರೆ ಗಾಜನ್ನು ಮುಚ್ಚಿಕೊಳ್ಳಿ, ಕಾರಿನ ಬಾಡಿಯನ್ನು ಸಾಧ್ಯವಾದಷ್ಟು ಸ್ಪರ್ಶಿಸದೇ ಮಧ್ಯದಲ್ಲಿ ಕುಳಿತುಕೊಳ್ಳುವುದು ಒಳ್ಳೆಯದು ಮತ್ತು ಕಂಪ್ಯೂಟರ್, ಲ್ಯಾಪ್‌ಟ್ಯಾಪ್‌ಗಳಿಂದ ದೂರವಿರಬೇಕು. ಮನೆಯ ಕಾಂಕ್ರೀಟ್ ಗೋಡೆಗಳನ್ನು ಸ್ಪರ್ಶಿಸದೇ ಕೋಣೆಯ ಮಧ್ಯದಲ್ಲಿದ್ದರೆ ಹೆಚ್ಚು ಸುರಕ್ಷಿತ.

ವಿದ್ಯುತ್ ಕಂಬ, ಎಲೆಕ್ಟ್ರಿಕಲ್ ಟವರ್, ಮೊಬೈಲ್ ಟವರ್, ಟ್ರಾನ್ಸ್‌ಫಾರ್ಮರ್ ಮುಂತಾದವುಗಳ ಹತ್ತಿರವೂ ಇರಬಾರದು. ಮಳೆ ಬರುವ ಸಮಯದಲ್ಲಿ ಮನೆಯ ಟೆರೇಸ್ ಅನ್ನು ಸ್ವಚ್ಛ ಮಾಡುವ ಸಾಹಸ ಮಾಡಬಾರದು.

ಜಿಲ್ಲೆಯ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಸಿಡಿಲು ಬಾಧಿತ ವ್ಯಕ್ತಿಗಳು ಆಗಮಿಸಿದಾಗ ತಕ್ಷಣ ಚಿಕಿತ್ಸೆ ಕ್ರಮಗಳನ್ನು ಕೈಗೊಳ್ಳುವ ಕುರಿತು ವೈದ್ಯಾಧಿಕಾರಿಗಳಿಗೆ ಮಾಹಿತಿ ನೀಡಲಾಗಿದ್ದು, ಅಗತ್ಯ ಔಷಧಿಗಳನ್ನು ದಾಸ್ತಾನು ಇಟ್ಟಿಕೊಳ್ಳಲಾಗಿದೆ ಎಂದು ಡಿಎಚ್‌ಒ ಡಾ. ಎಸ್.ಎಸ್. ನೀಲಗುಂದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೊಲೆಗಾರನಿಗೆ ಗಲ್ಲು ಶಿಕ್ಷೆ ವಿಧಿಸಲು ಒತ್ತಾಯ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಬೇಡ ಜಂಗಮ ಸಮಾಜದ ವತಿಯಿಂದ ಹುಬ್ಬಳ್ಳಿಯ ಬಿವ್ಹಿಬಿ ಕಾಲೇಜು ವಿದ್ಯಾರ್ಥಿನಿ ನೇಹಾ ಹಿರೇಮಠಳನ್ನು ಭೀಕರವಾಗಿ ಹತ್ಯೆ ಮಾಡಿದ ಆರೋಪಿ ಫಯಾಜ್‌ನನ್ನು ಗಲ್ಲು ಶಿಕ್ಷೆಗೆ ಗುರಿಪಡಿಸಲು ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾಧ್ಯಕ್ಷ ಶಿದ್ರಾಮಯ್ಯ ಕಟಗಿಹಳ್ಳಿಮಠ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಇಂತಹ ಕೃತ್ಯಗಳು ಹೆಚ್ಚಾಗುತ್ತಿದ್ದು, ಸರ್ಕಾರ ಕಠಿಣ ಕಾನೂನು ಕ್ರಮ ತೆಗೆದುಕೊಂಡು ಆರೋಪಿಗೆ ಗಲ್ಲು ಶಿಕ್ಷೆಗೆ ಗುರಿಪಡಿಸಿದರೆ, ಮುಂದೆ ಇಂತಹ ಕೃತ್ಯಗಳನ್ನೆಸಗುವವರಿಗೆ ತಕ್ಕ ಪಾಠ ಕಲಿಸಿದಂತೆ ಆಗುತ್ತದೆ ಎಂದು ಹೇಳಿದರು. ಇದಕ್ಕೆ ಸಂಬಂಧಪಟ್ಟಂತೆ ಪೊಲೀಸ್ ಇಲಾಖೆ ಹಾಗೂ ಶಿಕ್ಷಣ ಇಲಾಖೆ ಜಂಟಿಯಾಗಿ ಕಾಲೇಜು ವಿದ್ಯಾರ್ಥಿನಿಯರಿಗೆ ಮತ್ತು ಅವರ ಪಾಲಕರಿಗೆ ಆತ್ಮಸ್ಥೈರ್ಯ ತುಂಬುವ ಕಾರ್ಯ ಕೈಗೊಳ್ಳಬೇಕೆಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸೊರಟೂರ ಓಂಕಾರೇಶ್ವರ ಮಠದ ಶ್ರೀ ಫಕೀರಸ್ವಾಮಿಗಳು, ಬೇಡ ಜಂಗಮ ಸಮಾಜದ ತಾಲೂಕಾಧ್ಯಕ್ಷ ಜಿ.ಎಫ್. ಕೆಂಭಾವಿಮಠ, ಸದಸ್ಯರಾದ ಅಜಯ ಹಿರೇಮಠ, ಸಂತೋಷ ಹಿರೇಮಠ, ಅಂದಾನಯ್ಯ ಕಾರಡಗಿಮಠ, ಕುಮಾರ ದೇವದುರ್ಗಮಠ, ಅನಿಲ ಪೂಜಾರಿ, ಸುಗೀರಯ್ಯ ಅಂಬ್ರಳಗೋಳಮಠ, ಗಂಗಾಧರ ಎನ್.ಹಿರೇಮಠ ಮುಂತಾದವರಿದ್ದರು.

# ಜನ ಮನ ಸೆಳೆದ ಸಾಂಸ್ಕೃತಿಕ ಕಾರ್ಯಕ್ರಮ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪುಲಿಗೆರೆ ಉತ್ಸವದ 3ನೇ ದಿನವಾದ ಭಾನುವಾರ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ಬೆಂಗಳೂರಿನ ಕಲಾವಿದ ಡಾ.ರವೀಂದ್ರ ಗುರುರಾಜ ಕಾಟೋಟಿ ಅವರಿಂದ ಹೊಮ್ಮಿದ ಸೋಲೋ ಹಾರ್ಮೋನಿಯಂ ಸಂಗೀತ ಸುಧೆ ಪ್ರೇಕ್ಷಕರನ್ನು ಆಕರ್ಷಿಸಿತು. ಇವರಿಗೆ ಸುಮಿತ್ ನಾಯಕ್ ತಬಲಾ ಸಾಥ್ ನೀಡಿದರು.

ಬೆಂಗಳೂರಿನ ಅವಳಿ ಸಹೋದರಿಯರಾದ ಅರ್ಚನಾ ಹಾಗೂ ಚೇತನಾ ಅವರ ಭರತನಾಟ್ಯ ಪ್ರದರ್ಶನ ಕಲಾರಾಧಕರ ಮೆಚ್ಚುಗೆಗೆ ಪಾತ್ರವಾಯಿತು. ಗಜಸ್ತುತಿ-ಪುಷ್ಪಾಂಜಲಿ ನೃತ್ಯಗೈದ ಅವರ ಭರತನಾಟ್ಯದ ಎಲ್ಲ ಹಾವ-ಭಾವ, ಭಂಗಿಗಳಿಗೆ ಸೇರಿದ್ದ ಮಕ್ಕಳೂ ಸಹ ಚಪ್ಪಾಳೆಗೈದರು.

ಬೆಂಗಳೂರಿನ ಕಲಾವಿದೆ ಅನುಶ್ರೀ ಪದ್ಮನಾಭ ಅವರ ಶಿವತಾಂಡವ ಸ್ತೋತ್ರ, ವಿಷ್ಣುವಿನ ದಶಾವತಾರದ ಓಡಿಸ್ಸಿ ನೃತ್ಯ ಪ್ರಸ್ತುತಿ ನೆರೆದಿದ್ದ ಪ್ರೇಕ್ಷಕರ ಕಣ್ಮನ ಸೆಳೆಯಿತು. ಈ ನೃತ್ಯದೊಂದಿಗೆ ಪುಲಿಗೆರೆ ಉತ್ಸವ ಕಾರ್ಯಕ್ರಮ ಸಂಪನ್ನಗೊಂಡಿತು. ಈ ವೇಳೆ ಕಲಾವಿದರು, ಸಹಕರಿಸಿದವರನ್ನು ಸನ್ಮಾನಿಸಲಾಯಿತು.

# ನೇಹಾ ಕುಟುಂಬಕ್ಕೆ ನ್ಯಾಯ ಒದಗಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ವಿದ್ಯಾರ್ಥಿನಿ ನೇಹಾ ಹಿರೇಮಠರ ಹಂತಕನಿಗೆ ಕಠಿಣ ಶಿಕ್ಷೆ ವಿಧಿಸಿ, ಮೃತರ ಸಾವಿಗೆ ನ್ಯಾಯ ಒದಗಿಸಬೇಕೆಂದು ಒತ್ತಾಯಿಸಿ ಜಯ ಕರ್ನಾಟಕ ಜನಪರ ವೇದಿಕೆಯ ಸಂಸ್ಥಾಪಕ ಹಾಗೂ ಅಧ್ಯಕ್ಷ ಬಿ. ಗುಣರಂಜನಶೆಟ್ಟಿಯವರ ಸಾರಥ್ಯ ಹಾಗೂ ರಾಜ್ಯಾಧ್ಯಕ್ಷ ಜೆ. ಶ್ರೀನಿವಾಸರ ಆದೇಶದ ಮೇರೆಗೆ ರಾಜ್ಯ ಉಪಾಧ್ಯಕ್ಷ ಹಾಲಪ್ಪ ಈ.ವರವಿ ಹಾಗೂ ಗದಗ ಜಿಲ್ಲಾ ಅಧ್ಯಕ್ಷ ಸದಾನಂದ ನಂದಣ್ಣವರ ನೇತೃತ್ವದಲ್ಲಿ ಸಂಘಟನೆಯ ವತಿಯಿಂದ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ವೇದಿಕೆಯ ರಾಜ್ಯ ಉಪಾಧ್ಯಕ್ಷ ಹಾಲಪ್ಪ ವರವಿ, ರಾಜ್ಯದಲ್ಲಿ ಇಂತಹ ಪ್ರಕರಣಗಳು ಮೇಲಿಂದ ಮೇಲೆ ಆಗುತ್ತಿದ್ದು, ದುಷ್ಕರ್ಮಿಗಳಿಗೆ ಇಲ್ಲಿಯವರೆಗೂ ಯಾವುದೇ ಕಠಿಣ ಕ್ರಮವನ್ನು ಜಾರಿಗೆ ತರದೇ ಹೋಗಿರುವುದರಿಂದ ಇಂತಹ ಪ್ರಕರಣಗಳು ಮರುಕಳಿಸುತ್ತಿವೆ. ಕಾರಣ, ಪ್ರಕರಣಕ್ಕೆ ಸಂಬಂಧಪಟ್ಟ ವ್ಯಕ್ತಿ ಯಾವುದೇ ಧರ್ಮ ಅಥವಾ ಜಾತಿಗೆ ಸೇರಿದವರಾಗಿದ್ದರೂ ಕಠಿಣ ಶಿಕ್ಷೆಗೆ ಒಳಪಡಿಸಬೇಕು. ನೇಹಾ ಹಿರೇಮಠರ ಕುಟುಂಬಕ್ಕೆ ಸಾವಿನ ದುಃಖವನ್ನು ಭರಿಸುವ ಶಕ್ತಿಯನ್ನು ದೇವರು ಕರುಣಿಸಲಿ ಎಂದರು.

ಈ ಸಂದರ್ಭದಲ್ಲಿ ಸದಾನಂದ ನಂದಣ್ಣವರ, ಪ್ರಕಾಶ ಹಿರೇಮಠ, ರೇಖಾ ಜಡಿ, ಮುತ್ತು ಪೂಜಾರ, ವೆಂಕಟೇಶ ಶಾಂತಗೇರಿ, ಗೌಸ ಶಿರಹಟ್ಟಿ ಮುಂತಾದವರು ಉಪಸ್ಥಿತರಿದ್ದರು.

# ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ

▶▶ಮೊದಲನೇ ಪುಟದಿಂದ

ಇದರಿಂದ ತನಿಖೆ ಕೈಗೊಳ್ಳುವ ಅಧಿಕಾರಿಗಳ ಮೇಲೆ ದುಷ್ಪರಿಣಾಮ ಬೀರಬಹುದು ಎಂಬ ಪರಿಜ್ಞಾನವಿಲ್ಲದ ಗೃಹಮಂತ್ರಿಗಳ ಹೇಳಿಕೆ ಖಂಡನೀಯವಾಗಿದ್ದು, ಕಾನೂನು ಸುವ್ಯವಸ್ಥೆಯನ್ನು ಕಾಪಾಡುವಲ್ಲಿ ರಾಜ್ಯ ಸರಕಾರ ಅಸಮರ್ಥವಾಗಿದೆ ಎಂದು ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ ಆರೋಪಿಸಿದರು.

ಹುಬ್ಬಳ್ಳಿಯ ವಿದ್ಯಾರ್ಥಿನಿ ನೇಹಾ ಹಿರೇಮಠ ಹತ್ಯೆ ಪ್ರಕರಣದಲ್ಲಿ ರಾಜ್ಯ ಸರ್ಕಾರ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಹಾಗು ನ್ಯಾಯಪರ ತನಿಖೆಯನ್ನು ಚುರುಕುಗೊಳಿಸಿ, ತಪ್ಪಿತಸ್ಥ ವ್ಯಕ್ತಿಗೆ ಕಠಿಣ ಶಿಕ್ಷೆ ನೀಡಬೇಕೆಂದು ಆಗ್ರಹಿಸಿ, ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು.

ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ ಮಾತನಾಡಿ, ಕಳೆದ 8-10 ದಿನಗಳಲ್ಲಿ ರಾಜ್ಯದ ವಿವಿಧ ಕಡೆಗಳಲ್ಲಿ 8ಕ್ಕೂ ಹೆಚ್ಚು ಸರಣಿ ಹತ್ಯೆಗಳು ನಡೆದಿದ್ದು, ರಾಜ್ಯದ ಜನರನ್ನು ಆತಂಕಕ್ಕೀಡುಮಾಡಿದೆ. ಇದರಿಂದಾಗಿ ರಾಜ್ಯದ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದೆಗೆಟ್ಟಿರುವದು ಕಂಡುಬರುತ್ತದೆ ಎಂದು ದೂರಿದರು.

ಈ ಸಂದರ್ಭದಲ್ಲಿ ಮುಖಂಡರಾದ ಅನಿಲ ಮೆಣಸಿನಕಾಯಿ, ಬಸವರಾಜ ಇಟಗಿ, ಎಂ.ಎಂ. ಹಿರೇಮಠ, ರಾಜು ಕುಲಕರ್ಣಿ, ಎಂ.ಎಸ್. ಕರಿಗೌಡರ, ಅನಿಲ ಅಬ್ಬಿಗೇರಿ, ಜಗನ್ನಾಥಸಾ ಭಾಂಡಗೆ, ಸುರೇಶ ಚಿತ್ತರಗಿ, ಭದ್ರೇಶ ಕುಸ್ಲಾಪೂರ, ಬಾಬು ಸುಂಕದ, ದ್ಯಾಮಣ್ಣ ನೀಲಗುಂದ, ಲಿಂಗರಾಜ ಪಾಟೀಲ, ಆರ್.ಕೆ. ಚವ್ಹಾಣ, ಪಕ್ಕಿರೇಶ ರಟ್ಟಿಹಳ್ಳಿ, ವೀರಣ್ಣ ಅಂಗಡಿ, ಸಂತೋಷ ಅಕ್ಕಿ, ಪುನಿತ್ ಬೆನಕನವಾರಿ, ರವಿ ನೆರೆಗಲ್, ರವಿ ದಂಡಿನ, ರಾಜೇಂದ್ರಪ್ರಸಾದ ಹೊನ್ನಗಲ್, ಕೆ.ಪಿ. ಕೋಟಿಗೌಡರ, ಡಿ.ಬಿ. ಕರಿಗೌಡ್ರ, ಅಶೋಕ ಕರೂರ, ರಾಘವೇಂದ್ರ ಯಳವತ್ತಿ, ಮಂಜುನಾಥ ಶಾಂತಗೇರಿ, ನಿಂಗಪ್ಪ ಹುಗ್ಗಿ, ವಂದನಾ ವರ್ಣೇಕರ್, ಶಶಿಧರ ದಿಂಡೂರ, ವಿಜಯಲಕ್ಷ್ಮೀ ಮಾನ್ವಿ, ಅಶ್ವಿನಿ ಜಗತಾಪ, ರೇಖಾ ಬಂಗಾರಶೆಟ್ಟರ, ನಿರ್ಮಲಾ ಕೊಳ್ಳಿ, ಸ್ವಾತಿ ಅಕ್ಕಿ, ಉಷಾ ದಾಸರ, ಪದ್ಮಾ ಮುತ್ತಲದಿನ್ನಿ, ರವಿ ವಗ್ಗನವರ, ರಮೇಶ ಸಜ್ಜಗಾರ, ಅಮರನಾಥ ಬೆಟಗೇರಿ, ಅಶ್ವಿನಿ ಅಂಕಲಕೋಟಿ, ಪವಿತ್ರಾ ಕಲ್ಲುಕಟರ, ಜ್ಯೋತಿ ಪಾಯಪ್ಪಗೌಡ್ರ, ಪಾರ್ವತಿ ಪಟ್ಟಣಶೆಟ್ಟಿ, ಕಮಲಾಕ್ಷಿ ಗೊಂದಿ, ವಿದ್ಯಾವತಿ ಗಡಗಿ, ಪಾರ್ವತಿ ಪಟ್ಟಣಶೆಟ್ಟಿ, ರತ್ನಾ ಕುರಗೊಡ, ಸುಧೀರ ಕಾಟಿಗಾರ, ವಿನಾಯಕ ಹಬೀಬ, ನಾಗರಾಜ ತಳವಾರ, ವಿನೋದ ಹೌಸನೂರು ಮುಂತಾದವರು ಇದ್ದರು.

# ಆರೋಪಿ ಫಯಾಜ್‌ಗೆ ಗಲ್ಲು ಶಿಕ್ಷೆ ವಿಧಿಸಿ

▶▶ಮೊದಲನೇ ಪುಟದಿಂದ

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಹುಬ್ಬಳ್ಳಿ ನಗರದ ಕಾಲೇಜ್ ಕ್ಯಾಂಪಸ್‌ನಲ್ಲಿ ಹಾಡುಹಗಲೇ ವಿದ್ಯಾರ್ಥಿನಿ ನೇಹಾಳನ್ನು ಬರ್ಬರವಾಗಿ ಹತ್ಯೆ ಮಾಡಲಾಗಿದೆ. ತನಿಖೆ ಕೈಗೊಂಡು ತಪ್ಪಿತಸ್ಥನಿಗೆ ಶಿಕ್ಷೆ ಆಗುವಂತೆ ನೋಡಿಕೊಳ್ಳುವ ಬದಲು ತನಿಖೆಗೂ ಮುನ್ನವೇ ರಾಜ್ಯದ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು, ಗೃಹಮಂತ್ರಿಗಳು ವ್ಯಕ್ತಿಗತ ಕಾರಣಗಳಿಂದ ಈ ಕೃತ್ಯ ಜರುಗಿದೆ ಎಂದು ನೀಡಿರುವ ಹೇಳಿಕೆಗಳು ಖಂಡನೀಯ ಎಂದು ಹೇಳಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ ಮಾತನಾಡಿ, ಕಳೆದ 8-10 ದಿನಗಳಲ್ಲಿ ರಾಜ್ಯದ ವಿವಿಧ ಕಡೆಗಳಲ್ಲಿ 8ಕ್ಕೂ ಹೆಚ್ಚು ಸರಣಿ ಹತ್ಯೆಗಳು ನಡೆದಿದ್ದು, ರಾಜ್ಯದ ಜನರಲ್ಲಿ ಆತಂಕ ಹೆಚ್ಚಿಸಿದೆ. ಇದರಿಂದಾಗಿ ರಾಜ್ಯದ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದೆಗೆಟ್ಟಿರುವದು ಮೇಲ್ನೋಟಕ್ಕೆ ಕಂಡುಬರುತ್ತದೆ ಎಂದರು.

ಪ್ರತಿಭಟನೆಯ ಸಂದರ್ಭದಲ್ಲಿ ಮುಖಂಡರಾದ ಅನಿಲ ಮೆಣಸಿನಕಾಯಿ, ಬಸವರಾಜ ಇಟಗಿ, ಎಂ.ಎಂ. ಹಿರೇಮಠ, ರಾಜು ಕುಲಕರ್ಣಿ, ಎಂ.ಎಸ್. ಕರಿಗೌಡರ, ಜಗನ್ನಾಥಸಾ ಭಾಂಡಗೆ, ಸುರೇಶ ಚಿತ್ತರಗಿ, ಭದ್ರೇಶ ಕುಸ್ಲಾಪೂರ, ಬಾಬು ಸುಂಕದ, ದ್ಯಾಮಣ್ಣ ನೀಲಗುಂದ ಸೇರಿದಂತೆ ಕಾಲೇಜು ವಿದ್ಯಾರ್ಥಿಗಳು ಇದ್ದರು.

**'ಚೈತ್ರದ ಚಿಗುರು' ಬೇಸಿಗೆ ಶಿಬಿರ ಉದ್ಘಾಟಿಸಿದ ಡಿ.ಎಫ್. ಪಾಟೀಲ ಅಭಿಮತ**

# ಶಿಬಿರಗಳು ಮನೋವಿಕಾಸಕ್ಕೆ ದಾರಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಕ್ಕಳನ್ನು ಮೊಬೈಲ್ ಗೀಳಿನಿಂದ ಹೊರ ತರುವುದೇ ಇಂದಿನ ಮಹತ್ವದ ಜವಾಬ್ದಾರಿಯಾಗಿದೆ. ಇಂತಹ ಬೇಸಿಗೆ ಶಿಬಿರಗಳು ಮಕ್ಕಳ ಮನೋವಿಕಾಸದ ಪ್ರಮುಖ ಹಾದಿಯಾಗಿವೆ ಎಂದು ಮುಖ್ಯೋಪಾಧ್ಯಾಯೆ ಡಿ.ಎಫ್. ಪಾಟೀಲ ಅಭಿಪ್ರಾಯಪಟ್ಟರು.

ಅವರು ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಸರಕಾರಿ ಮಾದರಿ ಪ್ರಾಥಮಿಕ ಶಾಲೆ ನಂ-4ರ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಬೇಸಿಗೆ ಶಿಬಿರ 'ಚೈತ್ರದ ಚಿಗುರು' ಉದ್ಘಾಟಿಸಿ ಮಾತನಾಡುತ್ತಿದ್ದರು.

> ಪ್ರಾಸ್ತಾವಿಕವಾಗಿ ಮಾತನಾಡಿದ ಕಸಾಪ ತಾಲೂಕಾಧ್ಯಕ್ಷ ಈಶ್ವರ ಮೆಡ್ಲೇರಿ, ಕಸಾಪ ಲಕ್ಷ್ಮೇಶ್ವರ ಘಟಕವು ಪ್ರತಿ ವರ್ಷ ಬೇಸಿಗೆ ಶಿಬಿರಗಳನ್ನು ಹಮ್ಮಿಕೊಳ್ಳುತ್ತಿದೆ. ಈ ಶಿಬಿರದಲ್ಲಿ ಮಕ್ಕಳಿಗಾಗಿ ವಿಶೇಷ ಕಾರ್ಯ ಯೋಜನೆಗಳನ್ನು ರೂಪಿಸಲಾಗಿದೆ. ಮಕ್ಕಳು ಆಡಿ ಕಲಿ, ಮಾಡಿ ತಿಳಿ ತತ್ವ ಆಧರಿಸಿ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುತ್ತಿದ್ದಾರೆ ಎಂದರು.

ಸರಕಾರಿ ಮಾದರಿ ಪ್ರಾಥಮಿಕ ಶಾಲೆ ನಂ.4ರ ಮುಖ್ಯೋಪಾಧ್ಯಾಯ ಎಚ್.ಬಿ. ಸಣ್ಣಮನಿ ಮಾತನಾಡಿ, ಬೇಸಿಗೆ ರಜೆಯಲ್ಲಿ ವಿದ್ಯಾರ್ಥಿಗಳ ಬೌದ್ಧಿಕ ವಿಕಾಸಕ್ಕಾಗಿ ಹಲವಾರು ಚಟುವಟಿಕೆಗಳನ್ನೊಳಗೊಂಡ ಬೇಸಿಗೆ ಶಿಬಿರಗಳು ಪ್ರಮುಖ ಪಾತ್ರವಹಿಸುತ್ತವೆ. ಈ ಶಿಬಿರದಲ್ಲಿ ಮಕ್ಕಳಿಗಾಗಿ ಭೌತಿಕ ಹಾಗೂ ಬೌದ್ಧಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಸಂಘಟನಾ ಕಾರ್ಯದರ್ಶಿ ಸಂಗಮೇಶ ಅಂಗಡಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಚಂದ್ರು ನೇಕಾರ, ನ್ಯಾಯವಾದಿ ಪ್ರಕಾಶ ವಾಲಿ ಮಾತನಾಡಿದರು. ವೇದಿಕೆಯಲ್ಲಿ ಕ.ರಾ.ವಿ.ಪ ಜಿಲ್ಲಾ ಅಧ್ಯಕ್ಷ ರಮೇಶ ರಿತ್ತಿ, ಸಿಆರ್‌ಪಿ ಉಮೇಶ ನೇಕಾರ, ಶಿಬಿರದ ನಿರ್ದೇಶಕ ನಿರ್ಮಲ ಅರಳಿ, ಹಿರಿಯ ಶಿಕ್ಷಕ ಬಿ.ಬಿ. ದನದಮನಿ, ಎಸ್.ಬಿ. ಅಣ್ಣಿಗೇರಿ, ಎಸ್.ಎನ್. ತಾಯಮ್ಮನವರ, ಬಿಆರ್‌ಪಿ ಬಸವರಾಜ ಯರಗುಪ್ಪಿ, ಸಿಆರ್‌ಪಿ ಗಿರೀಶ ನೇಕಾರ ಉಪಸ್ಥಿತರಿದ್ದರು.

ಶಿಬಿರದ ಸಂಪನ್ಮೂಲ ವ್ಯಕ್ತಿಗಳಾದ ಆರ್.ಎಸ್. ಪಾಟೀಲ, ರಾಜೇಶ ಉಮಚಗಿ, ಬಿ.ಟಿ. ಹೆಬ್ಬಾಳ ವೇದಿಕೆಯಲ್ಲಿ ಹಾಜರಿದ್ದರು. ವಿವಿಧ ಶಾಲೆಗಳ 60ಕ್ಕೂ ಹೆಚ್ಚು ವಿದ್ಯಾರ್ಥಿಗಳು ಶಿಬಿರದ ಪ್ರಯೋಜನ ಪಡೆದರು. ಶ್ರೀನಿಧಿ ಶಂಕ್ರಪ್ಪ ಶಿಳ್ಳಿನ ಪ್ರಾರ್ಥಿಸಿದಳು. ಶಿಬಿರದ ನಿರ್ದೇಶಕ ಈರಣ್ಣ ಗಾಣಿಗೇರ ಸ್ವಾಗತಿಸಿದರು. ಗೌರವ ಕಾರ್ಯದರ್ಶಿ ಮಂಜುನಾಥ ಚಾಕಲಬ್ಬಿ ಕಾರ್ಯಕ್ರಮ ನಿರೂಪಿಸಿದರು. ಸಂಘಟನಾ ಕಾರ್ಯದರ್ಶಿ ನಾಗರಾಜ ಮಜ್ಜಿಗುಡ್ಡ ವಂದಿಸಿದರು.

# ಪಾನಕ ವಿತರಣೆ ಸಂದರ್ಭದಲ್ಲಿ ಮತದಾನ ಜಾಗೃತಿ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾ ಆಯುಷ್ ಇಲಾಖೆ ವತಿಯಿಂದ ಆರೋಗ್ಯಕರ ಆಯುಷ್ ಪಾನಕ ಪರಿಚಯ ಕಾರ್ಯಕ್ರಮವು ಸೋಮವಾರ ನಡೆಯಿತು.

ಚಿಂಚಾ ಪಾನಕ ವಿತರಣೆಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮತದಾನ ಮಹತ್ವದ ಕುರಿತು ಜಾಗೃತಿ ಮೂಡಿಸಲಾಯಿತು. ಜಿ.ಪಂ ಸಿಇಓ ಎಸ್. ಭರತ್, ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ, ಜಿಲ್ಲಾ ಆಯುಷ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಇದ್ದರು.

## ನಿಧನ ವಾರ್ತೆ

### ಸಂಗನಬಸಪ್ಪ ಜೋಳದ



ಗಜೇಂದ್ರಗಡ, ಪಟ್ಟಣದ ನವನಗರ ನಿವಾಸಿಯಾಗಿದ್ದ ಸಂಗನಬಸಪ್ಪ ಎಸ್. ಜೋಳದ (70) ಅವರು ಸೋಮವಾರ ನಿಧನರಾದರು.

ಮೃತರಿಗೆ ಪತ್ನಿ, ಪುತ್ರ, ಪುತ್ರಿ ಇದ್ದಾರೆ. ಮೃತರ ಅಂತ್ಯಕ್ರಿಯೆ ಮಂಗಳವಾರ ಮಧ್ಯಾಹ್ನ 1 ಗಂಟೆಗೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

# ಕುಡಿಯುವ ನೀರನ್ನು ಸಮರ್ಪಕವಾಗಿ ಪೂರೈಸಿ

▶▶ಮೊದಲನೇ ಪುಟದಿಂದ

ಯಾವುದೇ ರೀತಿ ಲೋಪ ಉಂಟಾಗದಂತೆ ಎಚ್ಚರ ವಹಿಸಬೇಕು. ಕುಡಿಯುವ ನೀರು ಪೂರೈಕೆಗೆ ಪ್ರಥಮ ಆದ್ಯತೆ ನೀಡಬೇಕು ಎಂದರು.

ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ, ಉಪ ವಿಭಾಗಾಧಿಕಾರಿ ವೆಂಕಟೇಶ ನಾಯ್ಕ, ಜಿ.ಪಂ ಉಪ ಕಾರ್ಯದರ್ಶಿ ಸಿ.ಬಿ. ದೇವರಮನಿ, ತಹಸೀಲ್ದಾರ ಶ್ರೀನಿವಾಸ ಕುಲಕರ್ಣಿ, ತಾ.ಪಂ ಇ.ಓಗಳು, ನೋಡಲ್ ಅಧಿಕಾರಿಗಳು ಇತರರಿದ್ದರು.

# ಪಂಚಮಸಾಲಿ ಮುಖಂಡರ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಮತಕ್ಷೇತ್ರದ ಕಾಂಗ್ರೆಸ್ ಬೆಂಬಲಿತ ಪಂಚಮಸಾಲಿ ಸಮಾಜದ ಶಹರ ಮತ್ತು ಗ್ರಾಮೀಣ ಮುಖಂಡರ ಸಭೆಯನ್ನು ಏ.23ರ ಸಂಜೆ 4.30ಕ್ಕೆ ಎಪಿಎಂಸಿ ಯಾರ್ಡ್‌ನಲ್ಲಿರುವ ಶ್ರೀ ಸಿದ್ದು ಪಾಟೀಲ್ ಇವರ ವಕಾರ ಸಾಲಿನಲ್ಲಿ (ಸ್ವಾಮಿ ವಿವೇಕಾನಂದ ಆಶ್ರಮದ ಎದುರುಗಡೆ) ಕರೆಯಲಾಗಿದ್ದು, ಪಂಚಮಸಾಲಿ ಸಮಾಜದ ಮುಖಂಡರು ಹಾಜರಾಗಬೇಕೆಂದು ಪ್ರಕಟಣೆ ತಿಳಿಸಿದೆ.

## ದೇವಸ್ಥಾನದ ಕಳಸಾರೋಹಣ ಇಂದು



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಆದಿತ್ಯ ನಗರದಲ್ಲಿ ಶ್ರೀ ಮಾರುತಿ ವಿವಿಧೋದ್ದೇಶಗಳ ಸೇವಾ ಸಂಘದ ವತಿಯಿಂದ ಶ್ರೀ ಮಾರುತಿ, ಶ್ರೀ ಗಣೇಶ, ಶ್ರೀ ಈಶ್ವರ ನಂದಿ, ಶ್ರೀ ಅನ್ನಪೂರ್ಣೇಶ್ವರಿ, ನವಗ್ರಹ ದೇವಸ್ಥಾನಗಳ ಕಳಸಾರೋಹಣ ಹಾಗೂ ಹನುಮ ಜಯಂತಿ ಕಾರ್ಯಕ್ರಮದ ಅಂಗವಾಗಿ ಸೋಮವಾರ ಸಾಯಂಕಾಲ ಮಹಿಳೆಯರ ಪೂರ್ಣ ಕುಂಭದೊಂದಿಗೆ ಆರತಿ, ಭಜನೆ, ಡೊಳ್ಳು, ವಾದ್ಯ ಮೇಳಗಳೊಂದಿಗೆ ಪಂಚ ಕಳಸಗಳ ಭವ್ಯ ಮೆರವಣಿಗೆ ಜರುಗಿತು.

ಏ. 23ರ ಬೆಳಿಗ್ಗೆ 4.30ಕ್ಕೆ ಮಹಾಗಣಪತಿ, ನವಗ್ರಹ ಹೋಮ, ರುದ್ರಾಭಿಷೇಕ, 7 ಗಂಟೆಗೆ ದೇವಸ್ಥಾನಗಳ ಕಳಸಾರೋಹಣ, 8 ಗಂಟೆಗೆ ಬಾಲ ಹನುಮನ ತೊಟ್ಟಿಲೋತ್ಸವ ಜರುಗಲಿದೆ. 9 ಗಂಟೆಗೆ ಧರ್ಮ ಚಿಂತನ ಸಭೆ ಜರುಗಲಿದ್ದು, ಸಭೆಯ ದಿವ್ಯ ಸಾನ್ನಿಧ್ಯವನ್ನು ಮಲ್ಲಸಮುದ್ರದ ಓಂಕಾರೇಶ್ವರ ಹಿರೇಮಠದ ಶ್ರೀ ಫಕೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸುವರು. ಅಡ್ನೂರಿನ ಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು, ನೀಲಗುಂದ ಗುದ್ನೇಶ್ವರ ಮಠದ ಶ್ರೀ ಪ್ರಭುಲಿಂಗದೇವರು, ನಂದಿವೇರಿಮಠದ ಶ್ರೀ ಶಿವಕುಮಾರ ಮಹಾಸ್ವಾಮಿಗಳು, ವೀರೇಶ್ವರ ಪುಣ್ಯಾಶ್ರಮದ ಶ್ರೀ ಕಲ್ಲಯ್ಯಜ್ಜನವರು ಸಾನ್ನಿಧ್ಯ ವಹಿಸಲಿದ್ದಾರೆ.

ಮಧ್ಯಾಹ್ನ 12.30ಕ್ಕೆ ಮಹಾ ಅನ್ನಸಂತರ್ಪಣೆ ಜರುಗಲಿದೆ ಎಂದು ಸಂಘದ ಪ್ರಕಟಣೆ ತಿಳಿಸಿದೆ.

### ಶ್ರೀ ಹಾಲೇಶ್ವರ ಜಾತ್ರಾ ಮಹೋತ್ಸವದ ನಿಮಿತ್ತ ಸಾಮೂಹಿಕ ವಿವಾಹ ಕಾರ್ಯಕ್ರಮ

## ಸರಳ ವಿವಾಹ ಉತ್ತಮ ನಿರ್ಧಾರ



■ವಿಜಯಸಾಕ್ಷಿ ಸುದ್ದಿ, ಡಂಬಳ

ಸಾಲ ಮಾಡಿ ಮದುವೆ ಮಾಡಿಕೊಳ್ಳುವುದಕ್ಕಿಂತ, ಹಣ ಉಳಿತಾಯದ ಜೊತೆಗೆ ಸರಳ- ಸಾಮೂಹಿಕ ಮದುವೆ ಮಾಡಿಕೊಳ್ಳುವುದು ಉತ್ತಮ ನಿರ್ಧಾರ ಎಂದು ವಿರಪಾಪುರದ ಗುರು ಮುದಕೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಡಂಬಳ ಹೋಬಳಿಯ ಪೇಠಾ ಆಲೂರ ಗ್ರಾಮದ ಶ್ರೀ ಹಾಲೇಶ್ವರ 46ನೇ ಜಾತ್ರಾ ಮಹೋತ್ಸವದ ನಿಮಿತ್ತ ಹಮ್ಮಿಕೊಂಡಿದ್ದ ಸಾಮೂಹಿಕ ವಿವಾಹ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ಇಂತಹ ದುಬಾರಿ ಸಮಯದಲ್ಲಿ ಮನೆ ಕಟ್ಟುವುದು ಮತ್ತು ಮದುವೆ ಮಾಡುವುದು ಬಹಳ ಕಷ್ಟದ ಕೆಲಸ. ಜೊತೆಗೆ ಆರ್ಥಿಕ ಸಮಸ್ಯೆಗಳನ್ನೂ ಎದುರಿಸಬೇಕಾಗುತ್ತದೆ. ಇದನ್ನು ಮನಗಂಡು ತ್ರಿವಿಧ ದಾಸೋಹಿ ಹಾಲೇಶ್ವರ ಶಿವಶರಣರು ಪ್ರತಿ ವರ್ಷ ಬಡವರಿಗಾಗಿ 450ಕ್ಕೂ ಹೆಚ್ಚು ಜೋಡಿಗಳಿಗೆ ಮದುವೆ ಮಾಡಿಸಿದ್ದು ಪ್ರಶಂಸನೀಯ ಎಂದು ಹೇಳಿದರು.

ತ್ರಿವಿಧ ದಾಸೋಹಿ ಹಾಲೇಶ್ವರ ಶಿವಶರಣರು ಮಾತನಾಡಿ, ಸಾಮೂಹಿಕ ಮದುವೆ ಮೂಲಕ ಗುರು-ಹಿರಿಯರ, ಮಠಾದೀಶರ ಆಶೀರ್ವಾದಕ್ಕೆ ಭಾಜನರಾದ ನೀವೇ ಧನ್ಯರು. ನಿಮ್ಮ ನವ ದಾಂಪತ್ಯ ಜೀವನ ಸುಖಕರವಾಗಲಿ ಎಂದು ಹಾರೈಸಿದರಲ್ಲದೆ, ದಾಂಪತ್ಯ ಜೀವನದಲ್ಲಿ ಕೋಪ ಮತ್ತು ದುಡುಕಿನ ನಿರ್ಧಾರಗಳನ್ನು ಬದಿಗಿಟ್ಟು ಕಷ್ಟ-ಸುಖಗಳನ್ನು ಸಮಾನವಾಗಿ ಸ್ವೀಕರಿಸಬೇಕು. ಸೊಸೆಯನ್ನು ನಿಮ್ಮ ಮನೆಯ ಮಗಳಂತೆ ಕಂಡರೆ ನಿಮ್ಮ ಮನೆ ಅನೋನ್ಯತೆಯ ಕೇಂದ್ರವಾಗಿರುತ್ತದೆ ಎಂದು ಕಿವಿಮಾತನ್ನು ಹೇಳಿದರು.

ಈ ಸಂದರ್ಭದಲ್ಲಿ 8 ಜೋಡಿಗಳು ಕಂಕಣ ಭಾಗ್ಯ ಪಡೆದರು. ಈರಮ್ಮ ಬ್ಯಾಲಿಹಾಳ ಕುಟುಂಬದವರಿಂದ ಅನ್ನಸಂತರ್ಪಣೆ ಜರುಗಿತು. ಕಾರ್ಯಕ್ರಮದಲ್ಲಿ ಹಾಲೇಶ್ವರ ಮಠದ ಕಾರ್ಯದರ್ಶಿ ವೇ.ಮೂ ಪಂಚಾಕ್ಷರಯ್ಯ ಹಿರೇಮಠ, ವೇ.ಮೂ. ಮಲ್ಲಯ್ಯ ಹಿರೇಮಠ, ಈರಮ್ಮ ಬ್ಯಾಲಿಹಾಳ, ಚಂದ್ರು ನಾಗರಡ್ಡಿ, ನಾಗಪ್ಪ ಚಿಕರಡ್ಡಿ, ವೀರನಗೌಡ ಸುಳ್ಳದ, ಶರಣಪ್ಪ ಬೂತರಡ್ಡಿ, ರವಿ ಚಾಕಲಬ್ಬಿ, ಹಾಲೇಶ ಸೂಡಿ, ಶರಣಪ್ಪ ಪರಡ್ಡಿ, ಮುನಿಯಪ್ಪ ಯು, ಹಾಲೇಶ್ವರ ಸಂಸ್ಥೆಯ ಹಳೆಯ ವಿದ್ಯಾರ್ಥಿಗಳು, ಗುರುವೃಂದದವರು, ಗ್ರಾಮಸ್ಥರು ಇದ್ದರು.

## ಮಹಾವೀರ ಜಯಂತಿ ಆಚರಣೆ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಕೇಂದ್ರ ಕಛೇರಿ ಹುಬ್ಬಳ್ಳಿಯಲ್ಲಿ ರವಿವಾರ ಭಗವಾನ ಮಹಾವೀರ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ದೀಪ ಬೆಳಗಿಸುವುದರ ಮೂಲಕ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮವನ್ನು ಉದ್ದೇಶಿಸಿ ಉಗ್ರಾಣ ಮತ್ತು ಖರೀದಿ ನಿಯಂತ್ರಕ ಐ.ಎ. ಕಂದಗಲ್ ಮಾತನಾಡಿ, ಜೈನಧರ್ಮದ 24ನೇ ತೀರ್ಥಂಕರರಾದ ಭಗವಾನ ಮಹಾವೀರ ಅವರು ಅಹಿಂಸೆಯನ್ನು ಬೋಧಿಸಿದರು. ಬದುಕಿರಿ ಮತ್ತು ಬದುಕಲು ಬಿಡಿ ಎಂಬ ತತ್ವದ ಮೂಲಕ ಸಮಾಜದಲ್ಲಿ ಸಮಾನತೆಯ ಸಂದೇಶಗಳನ್ನು ನೀಡಿದ್ದಾರೆ ಎಂದು ನುಡಿದರು.

ಸಿಬ್ಬಂದಿಗಳಾದ ಅರುಣ ಮೂಶನ್ನವರ, ವಿ.ಎಫ್. ಬಿಜಾಪೂರ, ರಾಜು ಮಹೇಂದ್ರಕರ, ವರ್ಷಾ ಜಾಧವ, ನಾಗರಾಜ ಹಬ್ಬು, ವಿಜಯಕುಮಾರ ಕಂಬಾರ, ಶಿವು ಬೆಂಡಿಗೇರಿ ಮುಂತಾದವರಿದ್ದರು. ವಿರೂಪಾಕ್ಷ ಕಟ್ಟಿಮನಿ ಪ್ರಾಸ್ತಾವಿಕವಾಗಿ ಮಾತನಾಡಿ ಕಾರ್ಯಕ್ರಮವನ್ನು ನಿರೂಪಿಸಿದರು.

### ಚನ್ನಮ್ಮ ಪದವಿ ಮಹಾವಿದ್ಯಾಲಯದಲ್ಲಿ ಮತದಾನ ಜಾಗೃತಿ ಹಬ್ಬದಲ್ಲಿ ಕೃಷ್ಣಪ್ಪ ಧರ್ಮರ

# ಮತದಾನದೊಂದಿಗೆ ದೇಶದ ಋಣ ತೀರಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಂವಿಧಾನವು ಎಲ್ಲರಿಗೂ ಸಮಾನ ಮತದಾನ ಮೌಲ್ಯ ನೀಡಿದೆ. ಎಲ್ಲರೂ ಕಡ್ಡಾಯವಾಗಿ ಮತ ಚಲಾಯಿಸಬೇಕು ಎಂದು ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷರು ಮತ್ತು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ ಹೇಳಿದರು.

ನಗರದ ಚನ್ನಮ್ಮ ಶೈಕ್ಷಣಿಕ ಮತ್ತು ವಿವಿಧೋದ್ದೇಶ ಸಮಿತಿ ಪದವಿ ಕಾಲೇಜು ಮೈದಾನದಲ್ಲಿ ಹಮ್ಮಿಕೊಂಡ ಮತದಾರರ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



18 ವರ್ಷ ತುಂಬಿದ ಎಲ್ಲ ಮತದಾರರು ಚುನಾವಣಾ ಪ್ರಕ್ರಿಯೆಯಲ್ಲಿ ಪಾಲ್ಗೊಂಡು ಮತದಾನ ಮಾಡುವ ಮೂಲಕ ದೇಶದ ಋಣ ತೀರಿಸಬೇಕು. ಯುವ ಜನರು ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡಿ ಬಲಿಷ್ಠ ಪ್ರಜಾಪ್ರಭುತ್ವ ರಾಷ್ಟ್ರವನ್ನು ನಿರ್ಮಿಸಬೇಕು. ಸುತ್ತ-ಮುತ್ತಲಿನ ಜನರಿಗೂ ಮತದಾನದ ಮಹತ್ವ ತಿಳಿಸಿಕೊಡಬೇಕು. ಎಲ್ಲ ಅರ್ಹ ಮತದಾರರು ಕಡ್ಡಾಯವಾಗಿ ಮತದಾನ ಮಾಡಿದಾಗ ಮಾತ್ರ ನಮ್ಮ ಪ್ರಜಾಪ್ರಭುತ್ವವು ಯಶಸ್ವಿಯಾಗುತ್ತದೆ ಎಂದು ಸಲಹೆ ನೀಡಿದರು.

ಶೇ.100ರಷ್ಟು ಮತದಾನವಾಗುವುದರಿಂದ ಸದೃಢ ಪ್ರಜಾಪ್ರಭುತ್ವ ಕಟ್ಟಲು ಸಾಧ್ಯ. ಆ ದಿಸೆಯಲ್ಲಿ ಸಂವಿಧಾನಾತ್ಮಕ ಹಕ್ಕಾದ ಮತದಾನ ಕಾರ್ಯದಲ್ಲಿ ತಪ್ಪದೇ ಪಾಲ್ಗೊಳ್ಳಬೇಕು. ಮೇ 7ರಂದು ಮತದಾನ ನಡೆಯಲಿದ್ದು, ಎಲ್ಲ ಕೆಲಸ-ಕಾರ್ಯಗಳನ್ನು ಬದಿಗೊತ್ತಿ ಮತದಾನದಲ್ಲಿ ಪಾಲ್ಗೊಳ್ಳಿ. ಯಾವುದೇ ಆಮಿಷಗಳಿಗೆ ಮರುಳಾಗಬೇಡಿ. ಯುವಜನರು ತಾವಷ್ಟೇ ಮತದಾನ ಮಾಡುವುದಲ್ಲದೆ, ತಮ್ಮ ಮನೆಯ ಸದಸ್ಯರು, ನೆರೆ-ಹೊರೆಯವರಿಗೂ ಮತದಾನ ಮಾಡುವುದರ ಬಗ್ಗೆ ಮನವರಿಕೆ ಮಾಡಿಕೊಡುವಂತೆ ತಿಳಿ ಹೇಳಿದರು.

ಶಾಲಾ ಮೈದಾನದಲ್ಲಿ ಮಾನವ ಸರಪಳಿ ನಿರ್ಮಿಸುವ ಮೂಲಕ ಮತದಾನದ ದಿನಾಂಕ ಪ್ರದರ್ಶನ ಎಲ್ಲರ ಗಮನ ಸೆಳೆಯಿತು. ಚೆನ್ನಮ್ಮ ಶೈಕ್ಷಣಿಕ ಮತ್ತು ವಿವಿಧೋದ್ದೇಶ ಸಮಿತಿ ಪದವಿ ಮಹಾವಿದ್ಯಾಲಯದ ಆಡಳಿತ ಮಂಡಳಿಯ ಸದಸ್ಯರು, ಮಹಾವಿದ್ಯಾಲಯದ ಪ್ರಾಚಾರ್ಯರು, ಉಪನ್ಯಾಸಕರು, ವಿವಿಧ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿ, ತಾಲೂಕು ಪಂಚಾಯಿತಿ ಅಧಿಕಾರಿಗಳು, ಸಿಬ್ಬಂದಿಗಳು ಪಾಲ್ಗೊಂಡಿದ್ದರು.

### ಮೊಳಗಿದ ಘೋಷಣೆಗಳು

ನಿಮ್ಮ ಮತ ನಿಮ್ಮ ಹಕ್ಕು, ಜಾಗೃತ ಮತದಾರ, ಸದೃಢ ಪ್ರಜಾಪ್ರಭುತ್ವ, ನಿಮ್ಮ ಮತ ಗೌಪ್ಯವಾಗಿರಲಿ, ಮತದಾನ ಪ್ರತಿಯೊಬ್ಬರ ಹಕ್ಕು ಮತ್ತು ಕರ್ತವ್ಯ, ಇನ್ನೊಬ್ಬರ ಹೆಸರಿನಲ್ಲಿ ಮತದಾನ ಮಾಡುವುದು ಅಕ್ಷಮ್ಯ ಅಪರಾಧ, ಮುಕ್ತ, ನ್ಯಾಯಸಮ್ಮತ ಹಾಗೂ ಶಾಂತಿಯುತ ಚುನಾವಣೆಗೆ ಸಹಕರಿಸಿ, ಚುನಾವಣೆ ಪ್ರಜಾಪ್ರಭುತ್ವದ ಭದ್ರ ಬುನಾದಿ, ಯಾವುದೇ ಆಸೆ ಆಮಿಷಗಳಿಗೆ ತುತ್ತಾಗದೆ ನಿರ್ಭೀತಿಯಿಂದ ಮತ ಚಲಾಯಿಸಿ, ಮತದಾರರ ಪಟ್ಟಿಯಲ್ಲಿ ಹೆಸರಿರುವುದನ್ನು ಖಚಿತಪಡಿಸಿಕೊಂಡು ಮತದಾನ ಮಾಡಿ ಎಂಬ ಘೋಷ ವಾಕ್ಯಗಳನ್ನು ವಿದ್ಯಾರ್ಥಿಗಳು ಮೊಳಗಿಸಿದರು.

# ದೇಶದ ಭವಿಷ್ಯ ಬರೆವ ಚುನಾವಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಅಧಿಕಾರಕ್ಕೆ ಬಂದ ಕೇವಲ ಹತ್ತು ತಿಂಗಳೊಳಗೆ ಭರವಸೆ ನೀಡಿದ ಎಲ್ಲಾ ಗ್ಯಾರಂಟಿಗಳನ್ನು ಈಡೇರಿಸಿದ್ದು ಕಾಂಗ್ರೆಸ್ ಸರ್ಕಾರ. ಲೋಕಸಭಾ ಚುನಾವಣೆಯ ಪ್ರಣಾಳಿಕೆಯಲ್ಲಿ 25 ಗ್ಯಾರಂಟಿಗಳನ್ನು ನೀಡಲಾಗಿದೆ. ಕೇಂದ್ರದಲ್ಲಿ ಕಾಂಗ್ರೆಸ್ ಸರಕಾರ ಬಂದ ಕ್ಷಣವೇ ಕೊಟ್ಟ ಮಾತಿನಂತೆ ಎಲ್ಲಾ ಗ್ಯಾರಂಟಿಗಳನ್ನು ಜಾರಿಗೊಳಿಸಲಾಗುವುದು. ಮುಂಬರುವ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕೆಂದು ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಮನವಿ ಮಾಡಿದರು.

ಗದಗ ಜಿಲ್ಲೆಯ ಶಿರಹಟ್ಟಿ, ಮುಂಡರಗಿ, ಲಕ್ಷ್ಮೇಶ್ವರ, ಬಾಲೆಹೊಸೂರ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಮುಖಂಡರ ಮತ್ತು ಕಾರ್ಯಕರ್ತರ ಚುನಾವಣಾ ಪ್ರಚಾರ ಸಭೆ ಹಾಗೂ ರೋಡ್‌ಶೋ ನಡೆಸಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಮುಂಡರಗಿ ಶ್ರೀ ಜಗದ್ಗುರು ಅನ್ನದಾನೀಶ್ವರ ಸಂಸ್ಥಾನ ಮಠಕ್ಕೆ ಭೇಟಿ ನೀಡಿ ಪೂಜ್ಯ ಶ್ರೀಗಳ ಆಶೀರ್ವಾದ ಪಡೆದರು. ಮಾಜಿ ಶಾಸಕರು ರಾಮಕೃಷ್ಣ ದೊಡ್ಡಮನಿ, ಸುಜಾತಾ ದೊಡ್ಡಮನಿ ಸೇರಿದಂತೆ ಕಾರ್ಯಕರ್ತರು ಇದ್ದರು.

### ಸಿರಿಧಾನ್ಯಗಳ ಅಡುಗೆ ಸ್ಪರ್ಧೆಯಲ್ಲಿ ವೀಣಾ ತಿರ್ಲಾಪೂರ ಅಭಿಮತ

## ಸಿರಿಧಾನ್ಯ ಭಾರತೀಯರ ಸಾಂಪ್ರದಾಯಿಕ ಆಹಾರ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತಕ್ಕೆ ಬ್ರಿಟಿಷರ ಆಗಮನದ ನಂತರ ನಾವು ಮೈದಾ, ಗೋಧಿಯಂಥ ಪಾಶ್ಚಾತ್ಯ ಆಹಾರದ ಕಡೆಗೆ ವಾಲಿದೆವು. ಆದರೆ ಅವರ ಆಗಮನಕ್ಕೂ ಮೊದಲು ಸಿರಿಧಾನ್ಯಗಳೇ ಭಾರತೀಯರ ಆಹಾರವಾಗಿದ್ದವು ಎಂದು ಕೆಎಲ್‌ಇ ಮಹಾವಿದ್ಯಾಲಯದ ಉಪನ್ಯಾಸಕಿ ವೀಣಾ ತಿರ್ಲಾಪೂರ ನುಡಿದರು.

ಅವರು ನಗರದ ತೋಂಟದಾರ್ಯ ಕಲ್ಯಾಣ ಕೇಂದ್ರದಲ್ಲಿ ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಮಹಿಳೆಯರಿಗಾಗಿ ಜರುಗಿದ ಸಿರಿಧಾನ್ಯಗಳ ಅಡುಗೆ ಸ್ಪರ್ಧೆಯಲ್ಲಿ ನಿರ್ಣಾಯಕರಾಗಿ ಭಾಗವಹಿಸಿ ಮಾತನಾಡಿದರು.

ಸಿರಿಧಾನ್ಯಗಳ ಸಿಹಿ ಅಡುಗೆ ತಯಾರಿಕೆಯಲ್ಲಿ ಸುಧಾ ಕೆರೂರ ಪ್ರಥಮ, ವಿದ್ಯಾ ಗಂಜಿಹಾಳ ದ್ವಿತೀಯ, ಲತಾ ಮಾನೆ ತೃತೀಯ ಸ್ಥಾನ ಪಡೆದರೆ, ಸಿರಿಧಾನ್ಯಗಳ ಖಾರದ ಅಡುಗೆಯಲ್ಲಿ ಸುಮಲತಾ ಕೋರಿಶೆಟ್ಟರ ಪ್ರಥಮ, ವಿದ್ಯಾ ಗಂಜಿಹಾಳ ದ್ವಿತೀಯ, ರತ್ನಕ್ಕ ತೆಲ್ಲೂರ ತೃತೀಯ ಸ್ಥಾನ ಪಡೆದರು.

ಪಾಶ್ಚಾತ್ಯ ಖಾದ್ಯಗಳಿಂದ ಪ್ರಭಾವಿತರಾಗಿ ನಮ್ಮ ಮೂಲ ಆಹಾರವಾದ ಸಿರಿಧಾನ್ಯಗಳನ್ನು ನಾವು ಕಡೆಗಣಿಸಿದ ಫಲವಾಗಿ ಆಧುನಿಕ ದಿನಗಳಲ್ಲಿ ರೋಗಗಳು ಹೆಚ್ಚಾಗುತ್ತಿದೆ. ರೋಗಮುಕ್ತವಾದ-ಆರೋಗ್ಯಕರ ಜೀವನಕ್ಕೆ ಸಿರಿಧಾನ್ಯಗಳ ಬಳಕೆ ಅವಶ್ಯಕ. ಶ್ರೀಮಠದ ಜಾತ್ರೆಯು ತನ್ನ ಸಾಮಾಜಿಕ ಕಾಳಜಿಗೆ ಹೆಸರುವಾಸಿಯಾಗಿದ್ದು, ಈ ಬಾರಿ ಸಿರಿಧಾನ್ಯಗಳ ಮಹತ್ವದ ಅರಿವು ಮೂಡಿಸುವ ಉದ್ದೇಶದಿಂದ ಮಹಿಳೆಯರಿಗಾಗಿ ಸಿರಿಧಾನ್ಯ ಅಡುಗೆ ತಯಾರಿಕೆಯ ಸ್ಪರ್ಧೆ ಆಯೋಜಿಸಿದ್ದು ಶ್ಲಾಘನೀಯವಾಗಿದೆ ಎಂದರು.

ಇನ್ನೋರ್ವ ನಿರ್ಣಾಯಕರಾದ ಅನುಸೂಯಾ ದೇವಾಂಗಮಠ ಮಾತನಾಡಿ, ಅಡುಗೆ ಹೆಣ್ಣಿಗೆ ದೈವದತ್ತವಾಗಿ ಒಲಿದುಬಂದಿದ್ದು, ಇತ್ತೀಚಿನ ದಿನಗಳಲ್ಲಿ ಮಹಿಳೆ ಅಡುಗೆಕೋಣೆಯನ್ನೂ ಮೀರಿ ಅನೇಕ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡುತ್ತಿರುವುದು ವಿಶೇಷ. ಇಂಥ ಅರ್ಥಪೂರ್ಣ ಸ್ಪರ್ಧೆಗಳಲ್ಲಿ ಭಾಗವಹಿಸುವುದು ಮುಖ್ಯವೇ ವಿನಃ ಗೆಲ್ಲುವುದಷ್ಟೇ ಅಲ್ಲ ಎಂದರು.

ಈ ಸಂದರ್ಭದಲ್ಲಿ ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಪ್ರೊ. ಕೆ.ಎಚ್. ಬೇಲೂರ, ಉಪಾಧ್ಯಕ್ಷರಾದ ಶ್ರೀದೇವಿ ಶೆಟ್ಟರ್, ಕಾರ್ಯದರ್ಶಿ ಪ್ರವೀಣ ವಾರಕರ, ಶ್ರೀಮಠದ ಮ್ಯಾನೇಜರ್ ಎಂ.ಎಸ್. ಅಂಗಡಿ, ಅಮರೇಶ ಅಂಗಡಿ, ಗವಿಸಿದ್ಧಪ್ಪ ಗಾಣಿಗೇರ, ಶಿವಲೀಲಾ ಅಕ್ಕಿ, ಸುರೇಖಾ ಪಿಳ್ಳೆ, ಅಕ್ಕಮಹಾದೇವಿ ಚಟ್ಟಿ, ರತ್ನಕ್ಕ ಪಾಟೀಲ, ಪ್ರಭು ಗಂಜಿಹಾಳ ಮುಂತಾದವರು ಉಪಸ್ಥಿತರಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ಉಮೇಶ ಸಂಗನಾಳಮಠ ಮಾಹಿತಿ

# ಬಹಿರಂಗ ಚುನಾವಣಾ ಪ್ರಚಾರ ನಾಳೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಲೋಕಸಭೆಯ ಚುನಾವಣಾ ಪ್ರಚಾರದ ನಿಮಿತ್ತ ಏ.24ರ ಸಂಜೆ 6ಕ್ಕೆ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ನರೇಗಲ್ಲಿಗೆ ಆಗಮಿಸಲಿದ್ದಾರೆ. ನರೇಗಲ್ಲ ಹೋಬಳಿಯ ಬಿಜೆಪಿ ಪಕ್ಷದ ಎಲ್ಲ ಕಾರ್ಯಕರ್ತರು, ಅಭಿಮಾನಿಗಳು, ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ನರೇಗಲ್ಲ ಹೋಬಳಿ ಬಿಜೆಪಿಯ ಅಧ್ಯಕ್ಷ, ನ್ಯಾಯವಾದಿ ಉಮೇಶ ಸಂಗನಾಳಮಠ ವಿನಂತಿಸಿದರು.

ಈ ಕುರಿತು ವಿವರಗಳನ್ನು ನೀಡಲು ಪಟ್ಟಣದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಬಸವರಾಜ ಬೊಮ್ಮಾಯಿ ಅವರನ್ನು ಹಾವೇರಿ ಕ್ಷೇತ್ರದಲ್ಲಿ ಆರಿಸಿ ತಂದು ಮೋದಿಯವರ ಕೈಗಳನ್ನು ಬಲಪಡಿಸಬೇಕಿದೆ. ಮೋದಿಯವರ ಸಂದೇಶವನ್ನು ತಲುಪಿಸುವ ಸಲುವಾಗಿ ನರೇಗಲ್ಲ ಹೋಬಳಿಯ ನರೇಗಲ್ಲದಲ್ಲಿ ಕೊಂತಿ ಮಲ್ಲಪ್ಪನ ದೇವಸ್ಥಾನದ ಎದುರಿಗೆ, ಮಾಜಿ ಗೌಡರ ಮನೆಯ ಪಕ್ಕದ ಬಯಲಿನಲ್ಲಿ ಬೃಹತ್ ಬಹಿರಂಗ ಚುನಾವಣಾ ಪ್ರಚಾರದ ಸಮಾವೇಶವನ್ನು ಏರ್ಪಡಿಸಲಾಗಿದೆ ಎಂದು ಸಂಗನಾಳಮಠ ಹೇಳಿದರು.

ಚುನಾವಣಾ ಪ್ರಚಾರಾರ್ಥ ಸಭೆಯಲ್ಲಿ ಭಾರತೀಯ ಜನತಾ ಪಕ್ಷದ ಅನೇಕ ಶಾಸಕರು, ಮಾಜಿ ಶಾಸಕರು, ಮಾಜಿ ಸಚಿವ ಕಳಕಪ್ಪ ಬಂಡಿ, ಕುಷ್ಟಗಿಯ ಶಾಸಕ ದೊಡ್ಡನಗೌಡ ಪಾಟೀಲರು, ಪ.ಪಂ ಮತ್ತು ತಾ.ಪಂ ಹಾಗೂ ಜಿ.ಪಂ ಸದಸ್ಯರು ಮತ್ತಿತರ ಮುಖಂಡರು ಭಾಗವಹಿಸಲಿದ್ದಾರೆ. ಆದ್ದರಿಂದ, ಭಾರತೀಯ ಜನತಾ ಪಕ್ಷದ ಎಲ್ಲ ಮುಖಂಡರು, ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಮಾವೇಶವನ್ನು ಯಶಸ್ವಿಗೊಳಿಸಲು ಉಮೇಶ ಸಂಗನಾಳಮಠ ಕೋರಿದರು.

ಮುಖಂಡ ಬಸವರಾಜ ವಂಕಲಕುಂಟಿ ಮಾತನಾಡಿ, ಅಬ್ಬಿಗೆರೆ, ಜಕ್ಕಲಿ, ನಿಡಗುಂದಿ, ಕೋಟುಮಚಗಿ, ಹರ್ಲಾಪೂರ ಮುಂತಾದ ಗ್ರಾಮಗಳ ಭಾರತೀಯ ಜನತಾ ಪಕ್ಷದ ಮಹಿಳಾ ಕಾರ್ಯಕರ್ತರು ಈ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು.

ಮುಖಂಡರಾದ ಶಶಿಧರ ಸಂಕನಗೌಡ್ರ ಮಾತನಾಡಿ, ಈ ಭಾಗದ ಅಭಿವೃದ್ಧಿಗಾಗಿ ನಾವೆಲ್ಲರೂ ಬೊಮ್ಮಾಯಿಯವರನ್ನು ಆಯ್ಕೆ ಮಾಡಲು ಶ್ರಮಿಸೋಣ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಅಲ್ಪ ಸಂಖ್ಯಾತ ಘಟಕದ ಹಸನ್ ಕಲೇಗಾರ, ಪುಟ್ಟಣ್ಣ ಹೊಸಮನಿ ಮುಂತಾದವರು ಉಪಸ್ಥಿತರಿದ್ದರು.

# ಕಾಂಗ್ರೆಸ್ ದೇಶದ ಅಭಿವೃದ್ಧಿಗೆ ಶ್ರಮಿಸಿದೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಜಾರಿಗೊಳಿಸಿದ ಯೋಜನೆಗಳ ಬಗ್ಗೆ ಅಪಹಾಸ್ಯ ಮಾಡುತ್ತಿರುವ ಬಿಜೆಪಿಗೆ ತಕ್ಕ ಪಾಠ ಕಲಿಸಲು ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಬೇಕೆಂದು ಹಾವೇರಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಹೇಳಿದರು.

ಅವರು ಸೋಮವಾರ ಶಿರಹಟ್ಟಿಯಲ್ಲಿ ಲೋಕಸಭಾ ಚುನಾವಣೆ ಪ್ರಚಾರದ ನಿಮಿತ್ತ ಪ್ರಮುಖ ಬೀದಿಗಳಲ್ಲಿ ರೋಡ್‌ಶೋ ನಡೆಸಿ ಮಾತನಾಡಿದರು.




ಕಾಂಗ್ರೆಸ್ ಪಕ್ಷ ದೇಶದ ಅಭಿವೃದ್ಧಿಗೆ ಶ್ರಮಿಸಿದೆ. ಹಲವಾರು ಜನಪ್ರಿಯ ಯೋಜನೆಗಳನ್ನು ಜಾರಿಗೊಳಿಸಿ ಎಲ್ಲ ವರ್ಗದವರ ಹಿತವನ್ನು ಕಾಪಾಡುತ್ತಾ ಬಂದಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಚುನಾವಣಾ ಪೂರ್ವ ನೀಡಿದ ಭರವಸೆಗಳನ್ನು ಈಡೇರಿಸಿ ನುಡಿದಂತೆ ನಡೆದಿದೆ. ಆದ್ದರಿಂದ ಕೇಂದ್ರದಲ್ಲೂ ಸಹ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ತರಲು ಸಹಕರಿಸಿ ಎಂದರು.

ಮಾಜಿ ಶಾಸಕರಾದ ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಗುರುನಾಥ ದಾನಪ್ಪನವರ, ಸುಜಾತಾ ದೊಡ್ಡಮನಿ ಮಾತನಾಡಿದರು.

ಬ್ಲಾಕ್ ಅಧ್ಯಕ್ಷ ಹುಮಾಯೂನ್ ಮಾಗಡಿ, ದೇವಪ್ಪ ಲಮಾಣಿ, ಡಿ.ಕೆ. ಹೊನ್ನಪ್ಪನವರ, ಮೈಲಾರೆಪ್ಪ ಹಾದಿಮನಿ, ಶಿವನಗೌಡ ಪಾಟೀಲ, ಚನ್ನಪ್ಪ ಜಗಲಿ, ವಿ.ಪಿ. ಮಠಪತಿ, ಪರಮೇಶ ಪರಬ, ರಾಜಣ್ಣ ಕುಂಬಿ, ಬುಡನಶ್ಯಾ ಮಕಾನದಾರ, ಹೊನ್ನಪ್ಪ ಶಿರಹಟ್ಟಿ, ಅಶ್ರತಅಲಿ ಢಾಲಾಯತ, ಎಂ.ಸಿ. ಹಿರೇಮಠ, ಮುತ್ತುರಾಜ ಭಾವಿಮನಿ, ಮಹಾಂತೇಶ ದಶಮನಿ, ಅಜ್ಜು ಪಾಟೀಲ, ಜಗದೀಶ ಗಾಂಜಿ, ಮಾಬುಸಾಬ ಲಕ್ಷ್ಮೇಶ್ವರ, ವಿರುಪಾಕ್ಷಪ್ಪ ನಂದೆಣ್ಣವರ ಮುಂತಾದವರು ಉಪಸ್ಥಿತರಿದ್ದರು.

### ಮನೋವೈದ್ಯ ಚಂದ್ರಶೇಖರ್, ವೆಂಕಯ್ಯ ನಾಯ್ಡು, ಮಿಥುನ್ ಚಕ್ರವರ್ತಿ, ಉಷಾ ಉತ್ತುಪ್, ರಾಮ್ ನಾಯಕ್ ಸೇರಿ ಹಲವರಿಗೆ ಪದ್ಮ ಪ್ರಶಸ್ತಿ ಪ್ರದಾನ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕರ್ನಾಟಕದ ಪ್ರಸಿದ್ಧ ಮನೋವೈದ್ಯ ಚಂದ್ರಶೇಖರ್, ಮಾಜಿ ಉಪರಾಷ್ಟ್ರಪತಿ ವೆಂಕಯ್ಯ ನಾಯ್ಡು, ಮಿಥುನ್ ಚಕ್ರವರ್ತಿ, ಉಷಾ ಉತ್ತುಪ್, ರಾಮ್ ನಾಯಕ್ ಸೇರಿ ಹಲವರಿಗೆ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪದ್ಮ ಶ್ರೀ ಪ್ರಶಸ್ತಿ ಪ್ರದಾನ ಮಾಡಿದರು.

ರಾಷ್ಟ್ರಪತಿ ಭವನದಲ್ಲಿ ಸೋಮವಾರ ನಡೆದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಉಪರಾಷ್ಟ್ರಪತಿ ಎಂ ವೆಂಕಯ್ಯ ನಾಯ್ಡು, ಸುಲಭ್ ಇಂಟರ್‌ನ್ಯಾಶನಲ್‌ನ ಸಂಸ್ಥಾಪಕ ಬಿಂದೇಶ್ವರ್ ಪಾಠಕ್ ಮತ್ತು ಇತರ ಪ್ರಮುಖ ವ್ಯಕ್ತಿಗಳಿಗೆ ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka